ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೧

ಪಟ್ಟಿ – ೦೭

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

ಮಂಗಳವಾರ, ದಿನಾಂಕ: ೦೭ನೇ ಜುಲೈ, ೨೦೧೫

---

**ಸಮೂಹ – II**

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

## ಮರಳು ಗಣಿಗಾರಿಕೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೦೭ (೮೦೨) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಮರಳು ಗಣಿಗಾರಿಕೆ ಪರವಾನಗಿ ನೀಡಲು ಎಷ್ಟು ಬ್ಲಾಕ್‌ಗಳನ್ನು ವಿಂಗಡಣೆ ಮಾಡಲಾಗಿದೆ; ವಿಂಗಡಣೆ ಮಾಡಲಾದ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ನೀಡಲಾಗುತ್ತಿದೆ;

(ಆ) ೨೦೧೪-೧೫ನೇ ಸಾಲಿನಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ಅನ್ವಯ ನೀಡಲಾಗಿದೆ ? (ಜಿಲ್ಲಾವಾರು ಮತ್ತು ಪರವಾನಗಿವಾರು ವಿವರ ನೀಡುವುದು)

## ರಾಜ್ಯದ ಸಹಕಾರ ಸಂಘಗಳಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಷೇರುದಾರರ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)** –

೬೦೮ (೮೦೩) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಸಹಕಾರ ಸಂಘಗಳಿವೆ ಅವು ಯಾವುವು;

(ಆ) ಇವುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿದ ಸಹಕಾರ ಸಂಘಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳಿಗೆ ಸೇರಿದ ಷೇರುದಾರರಿಗೆ ಷೇರುಧನವನ್ನು ಸರ್ಕಾರ ನೀಡುತ್ತಿದೆಯೇ; ನೀಡಲಾಗುತ್ತಿದ್ದಲ್ಲಿ, ನೀಡಿರುವ ಹಣ ಎಷ್ಟು;

(ಈ) ೨೦೧೪-೧೫ನೇ ಸಾಲಿನಲ್ಲಿ ಒಬ್ಬ ಷೇರುದಾರನಿಗೆ ಎಷ್ಟು ಷೇರುಧನ ನೀಡಲಾಗುತ್ತಿದೆ ?

## ಕೃಷಿ ಇಲಾಖೆವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಿರುವ ಸೌಲಭ್ಯದ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) –**

೬೦೯ (೮೦೧) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖಾವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡುತ್ತಿರುವ ಸೌಲಭ್ಯಗಳು ಯಾವುವು;

(ಆ) ಈ ವರ್ಗದವರಿಗಾಗಿ ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಹಣ ಸರ್ಕಾರದಿಂದ ನೀಡಲಾಗುತ್ತಿದೆ;

(ಇ) ೨೦೧೪–೧೫ನೇ ಸಾಲಿನಲ್ಲಿ ವಿಶೇಷ ಘಟಕ ಯೋಜನೆ (Scp ಮತ್ತು Tsp) ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸರ್ಕಾರ ಮೀಸಲಿಟ್ಟ ಹಣ ಎಷ್ಟು; ಖರ್ಚು ಮಾಡಲಾದ ಹಣ ಎಷ್ಟು; ಖರ್ಚು ಮಾಡದೇ ಉಳಿದ ಹಣ ಎಷ್ಟು;

(ಈ) ಯಾವ ಯಾವ ಜಿಲ್ಲೆಗಳಿಗೆ ವಿಶೇಷ ಘಟಕ ಯೋಜನೆ (Scp ಮತ್ತು Tsp) ಅಡಿಯಲ್ಲಿ ಎಷ್ಟೆಷ್ಟು ಹಣ ನೀಡಲಾಗಿದೆ?

## ಉಗ್ರಾಣಗಳನ್ನು ನಿರ್ಮಿಸುವ ಬಗ್ಗೆ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೧೦ (೮೦೬) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕೃಷಿ ಮಾರುಕಟ್ಟೆ ಆವರಣಗಳಲ್ಲಿ ಉಗ್ರಾಣಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ಶೀಥಲೀಕರಣ ಕೇಂದ್ರವನ್ನು ನಿರ್ಮಾಣ ಮಾಡುವ ಬಗ್ಗೆ ಉದ್ದೇಶಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ, ಎಂದಿನಿಂದ ಈ ಯೋಜನೆ ಆರಂಭ ಮಾಡಲಾಗುವುದು?

## ಜಲಾನಯನ ಅಭಿವೃದ್ಧಿ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೧೧ (೮೦೭) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಬೆಳಗಾವಿ ಜಿಲ್ಲೆಯಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ವಿವಿಧ ಕಾಮಗಾರಿಗಳಿಗೆ ಮಂಜೂರಾದ ಅನುದಾನದ ಮೊತ್ತವೆಷ್ಟು; (ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಿಂದ ಈ ಕ್ಷೇತ್ರದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು; (ವಿವರ ನೀಡುವುದು)

(ಇ) ಜಲಾನಯನ ಇಲಾಖೆಯಿಂದ ನಿರ್ವಹಿಸಿದ ಬಹುತೇಕ ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಕಳಪೆ ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರ ಮೇಲೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

## ಹಾವೇರಿ ಜಿಲ್ಲೆಯ ವಿದ್ಯುತ್ ಬೇಡಿಕೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೬೧೨ (೮೦೮) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಪ್ರತಿ ದಿನದ ವಿದ್ಯುತ್ ಬೇಡಿಕೆ ಎಷ್ಟು; ಈ ಬೇಡಿಕೆಗೆ ಅನುಗುಣವಾಗಿ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆಯೇ; ಇಲ್ಲವಾದಲ್ಲಿ ವಿದ್ಯುತ್ ಬೇಡಿಕೆ ಮತ್ತು ಲಭ್ಯತೆ ನಡುವೆ ಇರುವ ಅಂತರ ಕಡಿಮೆ ಮಾಡುವ ದಿಸೆಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಈ ಜಿಲ್ಲೆಯಲ್ಲಿ ಮಂಜೂರಾದ ಲೈನ್‌ಮೆನ್ (ನಿರ್ವಹಣಾ ಸಿಬ್ಬಂದಿ) ಹುದ್ದೆಗಳೆಷ್ಟು; (ಉಪವಿಭಾಗವಾರು ವಿವರ ನೀಡುವುದು)

(ಇ) ಖಾಲಿ ಇರುವ ಲೈನ್‌ಮೆನ್ ಹುದ್ದೆ ಭರ್ತಿ ಮಾಡಲು ಜಿಲ್ಲೆಯವರನ್ನೇ ಏಕೆ ಆಯ್ಕೆ ಮಾಡಬಾರದು? (ವಿವರ ನೀಡುವುದು)

## ರಾಜ್ಯದಲ್ಲಿನ ಪವನ ವಿದ್ಯುತ್ ಯಂತ್ರಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೬೧೩ (೮೦೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಕಂಪನಿಯವರು ಪವನ ವಿದ್ಯುತ್ (ಪವರ್‌ಗ್ರಿಡ್ ಗಾಳಿ ವಿದ್ಯುತ್ ಯಂತ್ರಗಳನ್ನು) ಅಳವಡಿಸಿದ್ದಾರೆ; (ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ಒದಗಿಸುವುದು)

(ಆ) ಆ ಪೈಕಿ ಪರವಾನಿಗೆ ಪಡೆದ ಕಂಪನಿಗಳೆಷ್ಟು; ಮತ್ತು ಪರವಾನಗಿ ಪಡೆಯದ ಕಂಪನಿಗಳು ಎಷ್ಟು; (ವಿವರ ನೀಡುವುದು)

(ಇ) ಪರವಾನಿಗೆ ಪಡೆಯದ ಕಂಪನಿಗಳ ಬಗ್ಗೆ ಸರ್ಕಾರಕ್ಕೆ ದೂರು ಬಂದಿದೆಯೇ; ಬಂದಿದ್ದರೆ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

(ಈ) ಯಂತ್ರಗಳು ಅಳವಡಿಸಿದ ಜಮೀನಿನ ಮಾಲೀಕರಿಗೆ ಸರಿಯಾದ ಹಣ ಪಾವತಿಯಾಗಿಲ್ಲವೆಂಬ ದೂರುಗಳು ಬಂದಿದೆಯೇ; ಈ ಯಂತ್ರಗಳಿಂದ ಪರಿಸರಕ್ಕೆ ತೊಂದರೆಯಿದೆಯೇ?

## ಬೀಜೋತ್ಪಾದನಾ ಕೇಂದ್ರಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)** –

೬೧೪ (೮೧೧) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಬೀಜೋತ್ಪಾದನಾ ಕೇಂದ್ರಗಳೆಷ್ಟು; ಅವು ಯಾವುವು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿ ಭತ್ತ ಬೆಳೆಯುವ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಹತ್ತಿ ಹಾಗೂ ಮೆಕ್ಕೆಜೋಳ ಬೆಳೆಯುವ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು; (ಗ್ರಾಮವಾರು, ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಸೇವಾ ದೃಷ್ಟಿಯಿಂದ ಈ ಕೇಂದ್ರದಿಂದ ರೈತರಿಗೆ ದೊರೆಯುವ ಸೌಲಭ್ಯವೇನು; ಇದರಿಂದ ಸರ್ಕಾರಕ್ಕೆ ಆಗುವ ಹಾನಿ ಎಷ್ಟು?

## ರೈತರಿಗೆ ಕೃಷಿಗೆ ಅಗತ್ಯವಾಗಿರುವ ಕೃಷಿ ಯಂತ್ರಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೬೧೫ (೮೧೨) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ರೈತರಿಗೆ ಅಗತ್ಯವಾಗಿರುವ ಕೃಷಿ ಯಂತ್ರ ಹಾಗೂ ಉಪಕರಣಗಳು ಯಾವುವು; (ವಿವರ ಒದಗಿಸುವುದು)

(ಆ) ಇಲಾಖಾ ವತಿಯಿಂದ ರೈತರಿಗೆ ಸಬ್ಸಿಡಿ ದರದಲ್ಲಿ ಯಂತ್ರ ಹಾಗೂ ಉಪಕರಣಗಳನ್ನು ವಿತರಣೆ ಮಾಡಲಾಗುತ್ತಿದೆಯೇ; ವಿತರಣೆಗೆ ಅನುಸರಿಸಲಾಗುತ್ತಿರುವ ಮಾನದಂಡವೇನು; (ಮಾಹಿತಿ ಒದಗಿಸುವುದು)

(ಇ) ಯಾವ ಯಾವ ಯಂತ್ರ ಹಾಗೂ ಕೃಷಿ ಉಪಕರಣಗಳಿಗೆ ಯಾವ ರೂಪದ ಸಬ್ಸಿಡಿ ದರಗಳನ್ನು ನಿಗದಿ ಪಡಿಸಲಾಗಿದೆ; ಸದರಿ ದರಗಳು ಎಂದಿನಿಂದ ಜಾರಿಯಲ್ಲಿವೆ; (ಮಾಹಿತಿ ಒದಗಿಸುವುದು)

(ಈ) ಸದರಿ ಸಬ್ಸಿಡಿ ದರವನ್ನು ಸರ್ಕಾರ ಆಗಿಂದಾಗ್ಗೆ ಪರಿಷ್ಕರಣೆ ಮಾಡುತ್ತಿದೆಯೇ; ಪರಿಷ್ಕರಣೆಗೆ ಅನುಸರಿಸುತ್ತಿರುವ ಮಾನದಂಡವೇನು;

(ಉ) ಕಳೆದ ೨ ವರ್ಷಗಳಿಂದ ಯಂತ್ರ ಹಾಗೂ ಉಪಕರಣಗಳ ಖರೀದಿಗೆ ಇಲಾಖೆಯಿಂದ ನೀಡಿದ ಸಬ್ಸಿಡಿ ಮೊತ್ತವೆಷ್ಟು? (ವಿವರಗಳೊಡನೆ ಮಾಹಿತಿ ಒದಗಿಸುವುದು)

## ರೈತರಿಗೆ ರಿಯಾಯಿತಿ ದರದಲ್ಲಿ ಕೃಷಿ ಉಪಕರಣ ನೀಡುವ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೬೧೬ (೮೧೩) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತರಿಗೆ ರಿಯಾಯಿತಿ ದರದಲ್ಲಿ ಕೃಷಿ ಉಪಕರಣ ನೀಡುವ ಮಾದರಿಯಲ್ಲಿ ಸೋಲಾರ್ ವಿದ್ಯುತ್ ಚಾಲಿತ ಐ.ಪಿ.ಸೆಟ್‌ಗಳನ್ನು ಪೂರೈಸುವ ಯೋಜನೆ ಜಾರಿಗೆ ತರಲಾಗುವುದೇ;

(ಆ) ಇದ್ದರೆ, ಎಷ್ಟು ಅಶ್ವ ಶಕ್ತಿಯವರೆಗೆ ರಿಯಾಯಿತಿ ನೀಡುವಿರಿ; ರಿಯಾಯಿತಿ ಪ್ರಮಾಣವೆಷ್ಟು; ಇದಕ್ಕೆ ಇರುವ ಮಾನದಂಡವೇನು;

(ಇ) ಈ ಯೋಜನೆಯಡಿ ಹಾವೇರಿ, ಗದಗ ಜಿಲ್ಲೆಗಳಲ್ಲಿ ಎಷ್ಟು ರೈತರಿಗೆ ನೀಡಲಾಗಿದೆ? (ವಿವರ ಒದಗಿಸುವುದು)

## ಕೃಷಿ ಅಭಿಯಂತರರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳದೇ ಇರುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) –**

೬೧೭ (೮೧೪) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಲ್ಲಿ ಕೃಷಿ ಇಲಾಖೆಯಲ್ಲಿ ಕೃಷಿ ಅಭಿಯಂತರರ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗಿದೆ; (B.Tech Agree Engineering)

(ಆ) ಕೃಷಿ ಇಲಾಖೆಯಲ್ಲಿ ರಾಜ್ಯಾದ್ಯಂತ ಖಾಲಿ ಇರುವ ಕೃಷಿ ಅಭಿಯಂತರರ ಹುದ್ದೆಗಳು ಎಷ್ಟು;

(ಇ) ೨೦೧೫-೧೬ನೇ ಸಾಲಿನಲ್ಲಿ ಖಾಲಿ ಇರುವ ಕೃಷಿ ಅಭಿಯಂತರರ ಹುದ್ದೆಗಳನ್ನು ಭರ್ತಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ನಿರಂತರ ಜ್ಯೋತಿ ಪರಿಕರಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೧೮ (೮೧೫) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಿರಂತರ ಜ್ಯೋತಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳಿಸುವ ಪರಿಕರಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳಪೆ ಗುಣಮಟ್ಟದ ಪರಿಕರಗಳು ಯಾವ ಯಾವ ಜಿಲ್ಲೆಗಳಲ್ಲಿ ಅಳವಡಿಸಲಾಗಿದೆ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಯೋಜನೆಗೆ ಸಂಬಂಧಪಟ್ಟ ಪಿನ್ನು ಮತ್ತು ಡಿಸ್ಕ್, ಜೆ.ಓ.ಸಿ., ಡಿ.ಓ.ಎಲ್.ಓ ಇವುಗಳನ್ನು ಅಳವಡಿಸಿ ३ ತಿಂಗಳಿಗೆ ಕೆಟ್ಟು ಹೋಗಿದ್ದು, ಇವುಗಳನ್ನು ಸರಿಪಡಿಸಿ ಉತ್ತಮ ಗುಣಮಟ್ಟದ ಪರಿಕರಗಳನ್ನು ಅಳವಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಗೃಹ ನಿರ್ಮಾಣ ಸಹಕಾರ ಸಂಘಗಳಿಂದ ನಿವೇಶನ ಹಂಚಿಕೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೬೧೯ (೮೧೭) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೧೦ ವರ್ಷಗಳಿಂದ ಬೆಂಗಳೂರಿನಲ್ಲಿರುವ ಯಾವ ಯಾವ ಸರ್ಕಾರಿ ಉದ್ಯೋಗಿಗಳ ಗೃಹ ನಿರ್ಮಾಣ ಸಂಘಗಳು ತನ್ನ

ಸದಸ್ಯರಿಗೆ ನಿವೇಶನ ನೀಡುವ ಆಸೆ ತೋರಿಸಿ, ಕೋಟ್ಯಾಂತರ ರೂ.ಗಳನ್ನು ವಸೂಲಿ ಮಾಡಿ, ನಿವೇಶನ ನೀಡದೆ ವಂಚಿಸಿರುತ್ತಾರೆ;

(ಆ) ಈ ರೀತಿಯ ವಂಚನೆಗಳಿಗೆ ಸಂಘಗಳಲ್ಲಿ ಹಾಗೂ ಸಹಕಾರ ಇಲಾಖಾಧಿಕಾರಿಗಳ ವ್ಯಾಪಕ ಭ್ರಷ್ಟಾಚಾರವೆ ಪ್ರಮುಖ ಕಾರಣವಾಗಿದ್ದು, ಇದನ್ನು ನಿವಾರಿಸಲು ಸರ್ಕಾರ ಕೈಗೊಳ್ಳುವ ಕಠಿಣ ಕ್ರಮಗಳು ಯಾವುದು;

(ಇ) ಇಂತಹ ಯಾವ ಯಾವ ಸಂಘಗಳ ಮೇಲೆ ತನಿಖೆಯಾದ ನಂತರ ಇಲಾಖಾಧಿಕಾರಿಗಳು ಕ್ರಮ ಕೈಗೊಂಡಿರುತ್ತಾರೆ ಅಥವಾ ಈವರೆವಿಗೂ ಸೂಕ್ತ ಕ್ರಮ ಕೈಗೊಳ್ಳದೆ ವಿಫಲವಾಗಿರುತ್ತಾರೆ? (ಪ್ರತಿ ಸಂಘವಾರು ಮಾಹಿತಿ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲ್ಲೂಕಿನಲ್ಲಿ ನೌಕಾನೆಲೆ ಅಧಿಕಾರಿಗಳ ಅವೈಜ್ಞಾನಿಕ ಕಾಮಗಾರಿಯಿಂದ ಸಾರ್ವಜನಿಕರಿಗೆ ಮಳೆಗಾಲದಲ್ಲಿ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) --**

೬೨೦ (೯೦೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲ್ಲೂಕಿನ ಚೆಂಡಿಯಾ, ಅರ್ಗಾ ಭಾಗದಲ್ಲಿ ನೌಕಾನೆಲೆ ಅಧಿಕಾರಿಗಳ ಅವೈಜ್ಞಾನಿಕ ಕಾಮಗಾರಿಯಿಂದಾಗಿ ಮಳೆಗಾಲದ ಪ್ರಾರಂಭದ ಹಂತದಲ್ಲಿಯೇ ತಾಲ್ಲೂಕಿನ ಅರ್ಗಾ, ಚೆಂಡಿಯಾ ಗ್ರಾಮಗಳಲ್ಲಿ ಸುತ್ತಮುತ್ತಲು ನೀರು ನಿಲ್ಲುತ್ತಿರುವುದರಿಂದ ಈ ವಿಷಯದಲ್ಲಿ ಜಿಲ್ಲಾಡಳಿತದ ನಿರ್ಲಕ್ಷದಿಂದಾಗಿ ಆ ಭಾಗದ ಜನತೆ ೨೦೦೯ರ ಅಕ್ಟೋಬರ್ ೨ನೆ ತಾರೀಖಿನ ದಿನವನ್ನು ಮತ್ತೊಮ್ಮೆ ಎದುರು

ನೋಡಲಾಗುತ್ತಿರುವ ವಿಷಯು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ;

(ಆ) ಸದರಿ ನೌಕಾನಲೆ ಅಧಿಕಾರಿಗಳಿಂದ ಈ ರೀತಿ ತೊಂದರೆಯಾಗುತ್ತಿರುವ ವಿಷಯ ಹಾಗೂ ಸಮಸ್ಯೆಗಳ ಬಗ್ಗೆ ಸಂಬಂಧಪಟ್ಟ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಅಧಿಕಾರಿಗಳಿಗೆ ಸಂಬಂಧಿಸಿದ ಜನರ ಮನವಿ ಸಲ್ಲಿಸಿದ್ದರೂ ಇಲ್ಲಿಯವರೆಗೆ ಯಾವ ಕ್ರಮ ಕೈಗೊಳ್ಳದೇ ಇರುವುದರಿಂದ ಆ ಭಾಗದ ಜನತೆ ಸದ್ಯದಲ್ಲಿ ಬೃಹತ್ ಪ್ರತಿಭಟನೆ ಮಾಡುವರಿದ್ದು, ಕೂಡಲೇ ಈ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಸೂಕ್ತ ಕ್ರಮಕೈಗೊಳ್ಳುವುದೇ; ಹಾಗಿದ್ದಲ್ಲಿ ಎಷ್ಟು ದಿವಸಗಳ ಒಳಗೆ ಸಂಬಂಧಿಸಿದವರ ಸಮಸ್ಯೆ ಇತ್ಯರ್ಥ ಪಡಿಸಲಾಗುವುದು? (ವಿವರ ನೀಡುವುದು).

## ವಿದ್ಯುತ್ ಅಪಘಾತಗಳ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೨೧ (೮೧೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿನಲ್ಲೂ ಬಹುತೇಕ ಹೆಸ್ಕಾಂ ಲೈನ್‌ಗಳು ಹಳೆಯದಾಗಿದ್ದು, ಕೆಲವು ಲೈನ್‌ಗಳು ತುಕ್ಕು ಹಿಡಿದು ಕಿತ್ತು ಬಿದ್ದಿರುವಂತಹ ಅಪಾಯದ ಸ್ಥಿತಿಯಲ್ಲಿರುವುದರಿಂದ ಜನ-ಜಾನುವಾರುಗಳು ಪ್ರಾಣಾಪಾಯಕ್ಕೆ ಒಳಗಾಗಿದ್ದರೂ ಸಹ ಹೆಸ್ಕಾಂನವರು ಸಿಬ್ಬಂದಿ ಕೊರತೆ, ಅನುದಾನ ಬಂದಿಲ್ಲ ಎಂಬ ಇತ್ಯಾದಿ ಕಾರಣಗಳನ್ನು ನೀಡಿ ನಿರ್ಲಕ್ಷ ತೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈಗಾಗಲೇ ಉತ್ತರ ಕನ್ನಡ ಜಿಲ್ಲೆಯಲ್ಲಿ ವಿದ್ಯುತ್ ಅಪಘಾತಗಳಿಂದ ಈವರೆವಿಗೆ ಎಷ್ಟು ಜನ/ಜಾನುವಾರುಗಳು ಸಾವಿಗೀಡಾಗಿದ್ದಾರೆ ಇದಕ್ಕೆ ಹೊಣೆಗಾರರು ಯಾರು; ಸಂತ್ರಸ್ತರಿಗೆ ಸರ್ಕಾರದಿಂದ ನೀಡಿರುವ ಪರಿಹಾರವೇನು? (ತಾಲ್ಲೂಕುವಾರು ವಿವರ ನೀಡುವುದು)

## ಸೀಬರ್ಡ್ ನಿರಾಶ್ರೀತರ ಕಾಲೋನಿಯಲ್ಲಿ ನಿರ್ಮಿಸಿರುವ ವಸತಿ ಗೃಹಗಳ ದುರ್ಬಳಕೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೨೨ (೮೧೮) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಕಾರವಾರದಲ್ಲಿ ಸೀಬರ್ಡ್ ನಿರಾಶ್ರಿತರಿಗೆ ನಿರ್ಮಿಸಿರುವ ಕಾಲೋನಿಯಲ್ಲಿ ಯಾರು ವಾಸ ಮಾಡದೆ ಇರುವುದರಿಂದ ಬಹಳಷ್ಟು ವಸತಿ ಗೃಹಗಳು ದುರ್ಬಳಕೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)

(ಆ) ಈ ರೀತಿ ಅನಾವಶ್ಯಕವಾಗಿ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಿದ ವಸತಿ ಗೃಹಗಳನ್ನು ಅನಧಿಕೃತವಾಗಿ ದುರ್ಬಳಕೆ ಮಾಡಿಕೊಳ್ಳಲು ಕಾರಣರಾದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ವಸತಿ ಗೃಹಗಳ ದುರ್ಬಳಕೆಯನ್ನು ತಡೆಗಟ್ಟಲು, ಸದರಿ ವಸತಿ ಗೃಹವನ್ನು ಬೇರೆ ಇಲಾಖೆಯ ನೌಕರರಿಗೆ ಹಂಚಿಕೆ ಮಾಡಲು ಅವಕಾಶ ಕಲ್ಪಿಸಬಹುದಲ್ಲವೇ? (ವಿವರ ನೀಡುವುದು)

## "ಶಾದಿ ಭಾಗ್ಯ" ಯೋಜನೆಯ ಸಂಪೂರ್ಣ ವಿವರ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೬೨೩ (೮೨೪) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ "ಶಾದಿ ಭಾಗ್ಯ" ಯೋಜನೆಗೆ ಮೀಸಲಿರಿಸಿದ ಅನುದಾನದ ಮೊತ್ತವೆಷ್ಟು; (ವಿವರ ನೀಡುವುದು)

(ಆ) "ಶಾದಿ ಭಾಗ್ಯ" ಯೋಜನೆ ಯಾವ ಯಾವ ಜಾತಿ ಮತ್ತು ವರ್ಗಗಳಿಗೆ ಅನ್ವಯವಾಗುತ್ತದೆ; ಸಂಪೂರ್ಣ ಮಾಹಿತಿ ನೀಡುವುದು;

(ಇ) ಕಳೆದ ಎರಡು ವರ್ಷಗಳಲ್ಲಿ "ಶಾದಿ ಭಾಗ್ಯ" ಪಡೆದುಕೊಂಡ ಫಲಾನುಭವಿಗಳ ಹೆಸರು ಮತ್ತು ಪೂರ್ಣ ವಿಳಾಸದ ತಾಲ್ಲೂಕುವಾರು ಮಾಹಿತಿ ನೀಡುವುದು ?

## ಬೀದರ್ ಜಿಲ್ಲೆಯಲ್ಲಿ ನಗರೋತ್ಥಾನ ಯೋಜನೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೬೨೪ (೮೨೩) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರೋತ್ಥಾನ ಯೋಜನೆ ಜಾರಿಗೆ ಬಂದಿದ್ದು ಯಾವಾಗ;

(ಆ) ಈ ಯೋಜನೆಯಡಿ ಬೀದರ್ ಜಿಲ್ಲೆಯಲ್ಲಿ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಿಗೆ ೨೦೧೪–೧೫–೧೬ನೇ ಸಾಲಿನವರೆಗೆ ನೀಡಿರುವ ಅನುದಾನವೆಷ್ಟು; (ವಿವರ ನೀಡುವುದು)

(ಇ) ಸದರಿ ಅವಧಿಯಲ್ಲಿ ಬಿಡುಗಡೆಗೊಳಿಸಲಾದ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ವಿನಿಯೋಗಿಸಲಾಗಿದೆಯೇ;

(ಈ) ಈ ಯೋಜನೆಗೆ ಸಂಬಂಧಿಸಿದಂತೆ ನಡೆದಿರುವ ಅವ್ಯವಹಾರ ಪ್ರಕರಣಗಳು ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಸಹಕಾರ ಬ್ಯಾಂಕುಗಳ ಕುರಿತು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೬೨೫ (೮೨೧) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೧೦ ವರ್ಷಗಳಲ್ಲಿ ಸ್ಥಾಪನೆಗೊಂಡ ಸಹಕಾರ ಬ್ಯಾಂಕುಗಳ ಸಂಖ್ಯೆ ಎಷ್ಟು; ಅದರಲ್ಲಿ ಕೆಲಸ ನಿರ್ವಹಿಸುತ್ತಿರುವ ಸಹಕಾರ ಬ್ಯಾಂಕುಗಳ ಸಂಖ್ಯೆ ಎಷ್ಟು;

(ಆ) ಕಳೆದ ಹತ್ತು ವರ್ಷಗಳಲ್ಲಿ ದಿವಾಳಿಯಾದ ಬ್ಯಾಂಕುಗಳಲ್ಲಿ ಯಾವುದಾದರೂ ವಿಚಾರಣೆ ಆಗಿದೆಯೇ; ಹಾಗಿದ್ದಲ್ಲಿ, ಅದರ ಪ್ರತಿಯನ್ನು ನೀಡುವುದು?

## ಕೃಷಿ ಇಲಾಖೆಯಲ್ಲಿನ ಕಾರ್ಯಕ್ರಮಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೬೨೬ (೮೨೨) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ವಿವಿಧ ಕಾರ್ಯಕ್ರಮಗಳು ಯಾವುವು; (ಯೋಜನಾವಾರು ವಿವರ ನೀಡುವುದು)

(ಆ) ಇಲಾಖೆಯ ಕಾರ್ಯಕ್ರಮಗಳಿಗೆ ನಿಗಧಿಪಡಿಸಿದ ಸರ್ಕಾರದಿಂದ ಬಿಡುಗಡೆಯಾದ ಮತ್ತು ಖರ್ಚಾದ ಅನುದಾನದ ಮೊತ್ತ ಎಷ್ಟು; (ಯೋಜನಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಕೃಷಿ ಕಾರ್ಯಕ್ರಮಗಳು ಸರಿಯಾಗಿ ಅನುಷ್ಠಾನಗೊಳ್ಳದೆ ಇರುವುದರಿಂದ ಅಧಿಕಾರಿಗಳ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು?

## ರೈತರಿಗೆ ನೀಡುವ ಸಾಲದ ಬಡ್ಡಿ ದರದ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** –

೬೨೭ (೮೨೮) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಸಹಕಾರ ಸಂಘಗಳ ಮೂಲಕ ರೈತರಿಗೆ ನೀಡುವ ಕಡಿಮೆ ಬಡ್ಡಿ ದರದ ಸಾಲದ ಪ್ರಮಾಣವನ್ನು ಕಡಿಮೆ ಮಾಡಿದೆಯೇ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು;

(ಆ) ಕಳೆದ ವರ್ಷ ಈ ರೀತಿ ನೀಡಿರುವ ಸಾಲದ ಪ್ರಮಾಣ ಎಷ್ಟು; ಎಷ್ಟು ಜನ ರೈತರಿಗೆ ಸಾಲವನ್ನು ನೀಡಲಾಗಿದೆ; ಒಟ್ಟು ನೀಡಿರುವ ಸಾಲದ ಮೊತ್ತವೆಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಈ ಪೈಕಿ ನಬಾರ್ಡ್‌ನಿಂದ ಬಂದಿರುವ ಮೊತ್ತವೆಷ್ಟು; ಸದರಿ ಮೊತ್ತದ ಪ್ರಮಾಣವು ಈ ಆರ್ಥಿಕ ವರ್ಷದಲ್ಲಿ ಕಡಿಮೆಯಾಗಿದೆಯೆ;

(ಈ) ಯಾವ ಪ್ರಮಾಣದಲ್ಲಿ ನಬಾರ್ಡ್ ಪಾಲಿನ ಮೋತಾ ಕಡಿಮೆಯಾಗಲಿದೆ; ಇದನ್ನು ಸರ್ಕಾರ ಹೇಗೆ ಸರಿದೂಗಿಸುತ್ತದೆ; ರಾಜ್ಯದ ರೈತರ ಮೇಲೆ ಇದು ಪರಿಣಾಮ ಬೀರುವುದೇ; ಈ ಬಗ್ಗೆ ಸರ್ಕಾರದ ಮುಂದಿನ ಕ್ರಮಗಳೇನು? (ವಿವರ ನೀಡುವುದು)

## ಶಿರಾಡಿಘಾಟ್ ರಾಷ್ಟ್ರೀಯ ಹೆದ್ದಾರಿ

**ಶ್ರೀಮತಿ ಎ.ವಿ. ಗಾಯಿತ್ರಿ ಶಾಂತೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೨೮ (೮೩೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರಿನಿಂದ ಬೆಂಗಳೂರಿಗೆ ಸಂಪರ್ಕ ಕಲ್ಪಿಸುವ ಶಿರಾಡಿ ಘಾಟ್ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿ ನಡೆಯುತ್ತಿರುವುದರಿಂದ ಆ ಮಾರ್ಗದ ವಾಹನಗಳು ಚಾರ್ಮುಡಿ ಘಾಟ್ ರಾಜ್ಯ ಹೆದ್ದಾರಿ ಮೂಲಕ ಸಂಚರಿಸುತ್ತಿದ್ದು, ವಾಹನಗಳ ದಟ್ಟಣೆಯಿಂದ ಸಂಚಾರ ವ್ಯವಸ್ಥೆ ಅಸ್ತವ್ಯಸ್ತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ವಹಿಸಿರುವ ಕ್ರಮಗಳೇನು;

(ಆ) ಶಿರಾಡಿ ಘಾಟ್ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿ ಮುಕ್ತಾಯಗೊಳ್ಳುವುದು ಯಾವಾಗ; (ಮಾಹಿತಿ ಒದಗಿಸುವುದು)

(ಇ) ವಾಹನಗಳ ದಟ್ಟಣೆಯಿಂದ ದುರಾವಸ್ಥೆಯಲ್ಲಿರುವ ಚಾರ್ಮುಡಿ ಘಾಟ್ ರಸ್ತೆ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಚಾರ್ಮುಡಿ ಘಾಟ್ ರಾಜ್ಯ ಹೆದ್ದಾರಿಯಲ್ಲಿ ಈಗಿನ ವಾಹನ ದಟ್ಟಣೆ ತಗ್ಗಿಸಲು ಶಿಶಿಲ–ಭೈರಾಪುರ ಮಾರ್ಗ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಇತ್ತೀಚೆಗೆ ಸುರಿದ ಆಲಿಕಲ್ಲು ಮಳೆಯಿಂದ ತೋಟಗಾರಿಕೆ ಬೆಳೆಗಳ ಹಾನಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೬೨೯ (೯೧೯) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಇತ್ತೀಚೆಗೆ ಸುರಿದ ಬಾರಿ ಅಕಾಲಿಕ ಆಲಿಕಲ್ಲು ಬಿರುಗಾಳಿ ಸಹಿತ ಮಳೆಯಿಂದ ತೋಟಗಾರಿಕೆ ಬೆಳೆಗಳು ಹಾನಿಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ತೋಟಗಾರಿಕೆ ಬೆಳೆಗಳಾದ ಮಾವು, ದ್ರಾಕ್ಷಿ ಹಾಗೂ ಇತರೆ ಬೆಳೆಗಳು ಹಾನಿಯಾಗಿರುವ ಬಗ್ಗೆ ಅಧ್ಯಯನ ನಡೆಸಲು ಕೇಂದ್ರ ಮತ್ತು ರಾಜ್ಯ ಸರ್ಕಾರವು ಅಧಿಕಾರಿಗಳಿಂದ ಪರಿಶೀಲನೆ ಮಾಡಲಾಗಿದೆಯೇ;

(ಇ) ಸರ್ಕಾರ ಯಾವ ಯಾವ ಜಿಲ್ಲೆಗಳಲ್ಲಿ ರೈತರಿಂದ ಅಹವಾಲು ಸ್ವೀಕರಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಹೈದ್ರಾಬಾದ್–ಕರ್ನಾಟಕ ಈ ಭಾಗದಲ್ಲಿ ತೋಟಗಾರಿಕೆ ಬೆಳೆಗಳು ಹಾನಿಗೊಳಗಾದ ಪ್ರಮಾಣ ಎಷ್ಟು; ಹಾಗೂ ಹಾನಿಗೊಳಗಾದ ಪ್ರತಿ ಎಕರೆಗೆ ಎಷ್ಟು ಮೊತ್ತದ ಪರಿಹಾರ ನೀಡಲು ಅಂದಾಜಿಸಲಾಗಿದೆ? (ಎಕರೆವಾರು ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದಲ್ಲಿರುವ ೬ ಜಿಲ್ಲೆಗಳಿಗೆ ಬಿಡುಗಡೆಯಾಗಿರುವ ಅನುದಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೬೩೦ (೯೨೩) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್ -ಕರ್ನಾಟಕ ಭಾಗದಲ್ಲಿರುವ ೬ ಜಿಲ್ಲೆಗಳು ಮತ್ತು ಹರಪನಹಳ್ಳಿ ತಾಲ್ಲೂಕಿನಲ್ಲಿ ರಸ್ತೆ ಮತ್ತು ಇತರೆ ಕಾಮಗಾರಿಗಳ ಅಭಿವೃದ್ಧಿ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಹೈದರಾಬಾದ್-ಕರ್ನಾಟಕ ಭಾಗದಲ್ಲಿರುವ ೬ ಜಿಲ್ಲೆಗಳು ಮತ್ತು ಹರಪ್ಪನಹಳ್ಳಿ ತಾಲ್ಲೂಕಿನ ಈ ಭಾಗಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; (ಮಾಹಿತಿ ನೀಡುವುದು)

(ಇ) ಬಿಡುಗಡೆಯಾಗಿರುವ ಅನುದಾನದಲ್ಲಿ ಇದೂವರೆಗಿನ ರಸ್ತೆ ಹಾಗೂ ಇತರೆ ಕಾಮಗಾರಿಗಳಿಗೆ ಖರ್ಚಾಗಿರುವ ವೆಚ್ಚವೆಷ್ಟು; ಹಾಗೂ ಎಷ್ಟು ಕಿ.ಮೀ.ಗಳ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಪೂರ್ಣಗೊಳಿಸಲಾಗಿದೆ;

(ಈ) ಹೈದರಾಬಾದ್-ಕರ್ನಾಟಕ ಭಾಗದ ಜಿಲ್ಲೆಗಳಿಗೆ ರಸ್ತೆ ಮತ್ತು ಇತರೆ ಕಾಮಗಾರಿಗಳಿಗೆ ಹೆಚ್ಚುವರಿಯಾಗಿ ೨೦೧೫-೧೬ ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು? (ತಾಲ್ಲೂಕುವಾರು, ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಯಚೂರು ಮತ್ತು ಮಂತ್ರಾಲಯಕ್ಕೆ ಹೋಗುವ ರಸ್ತೆ ಕಾಮಗಾರಿಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ)** –

೬೩೧ (೯೨೨) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಿಂದ ಪ್ರಸಿದ್ಧ ಯಾತ್ರಾ ಸ್ಥಳವಾದ ಮಂತ್ರಾಲಯಕ್ಕೆ ಹೋಗುವ ಕೆಲ ಭಾಗದ ರಸ್ತೆಗಳು ತುಂಬಾ ಹದಗೆಟ್ಟಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ರಸ್ತೆ ಅಭಿವೃದ್ಧಿ ಕಾಮಗಾರಿಯು ಎಷ್ಟು ಕಿ.ಮೀ ವ್ಯಾಪ್ತಿಯಲ್ಲಿ ಪೂರ್ಣಗೊಳಿಸಲಾಗಿದೆ; ಬಾಕಿ ಇರುವ ಕಾಮಗಾರಿಗಳೆಷ್ಟು; ಮಾಹಿತಿ ನೀಡುವುದು;

(ಇ) ಸದರಿ ರಸ್ತೆ ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ಹಾಗೂ ಎಷ್ಟು ದಿನಗಳ ಒಳಗಡೆ ಸದರಿ ಕಾಮಗಾರಿ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ;

(ಈ) ದೇಶದ ನಾನಾ ಭಾಗಗಳಿಂದ ಪ್ರಸಿದ್ಧ ಯಾತ್ರಾ ಸ್ಥಳವಾದ ಮಂತ್ರಾಲಯದ ದೇವಸ್ಥಾನಕ್ಕೆ ಜನರು ಭೇಟಿ ನೀಡುತ್ತಿರುವುದರಿಂದ ರಾಯಚೂರು ಮತ್ತು ಮಂತ್ರಾಲಯಕ್ಕೆ ಹೋಗುವ ರಸ್ತೆಗಳಿಗೆ ಸರ್ಕಾರವು ಹೆಚ್ಚುವರಿಯಾಗಿ ಮಂಜೂರು ಮಾಡಿರುವ ಮೊತ್ತ ಹಾಗೂ ೨೦೧೫-೧೬ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಮೊತ್ತವೆಷ್ಟು? (ಸಂಪೂರ್ಣವಾಗಿ ಮಾಹಿತಿ ನೀಡುವುದು)

## ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ತೋಟಗಾರಿಕೆ ಯೋಜನೆಗಳಿಗೆ ಬಿಡುಗಡೆಯಾಗಿರುವ ಅನುದಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೬೩೨ (೯೨೪) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ತೋಟಗಾರಿಕೆಗೆ ಪ್ರೋತ್ಸಾಹಿಸುವ ಯೋಜನೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

**(ಆ) ಈ ಯೋಜನೆಗಳಿಗಾಗಿ ೨೦೧೩-೧೪, ೨೦೧೪-೧೫ ಹಾಗೂ ೨೦೧೫-೧೬ ನೇ ಸಾಲಿನಲ್ಲಿ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ**

ಪಂಗಡ ಹಾಗೂ ಹಿಂದುಳಿದ ವರ್ಗದ ರೈತರಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಿಡುಗಡೆಯಾದ ಅನುದಾನದ ಪೈಕಿ ಇಲ್ಲಿಯವರೆಗೆ ಖರ್ಚಾದ ಹಾಗೂ ಬಾಕಿ ಉಳಿದ ಅನುದಾನ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಯೋಜನೆಗಳ ಲಾಭ ಮತ್ತು ಪ್ರಯೋಜನೆ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಅಡಿಕೆ ಕೊಳೆ ರೋಗಕ್ಕೆ ಬಳಸುವ ಬಯೋಪೈಡ್ ದ್ರಾವಣದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೬೩೩ (೮೩೮) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಅಡಿಕೆ ಬೆಳೆಗಾರರು ಕೊಳೆ ರೋಗದ ನಿಯಂತ್ರಣಕ್ಕೆ ಬಳಸುತ್ತಿರುವ ಬಯೋಪೈಡ್ ದ್ರಾವಣವು ಇಲಾಖೆಯಿಂದ ಅಂಗೀಕೃತಗೊಂಡಿದೆಯೇ; ಅಂಗೀಕೃತಗೊಂಡಿದ್ದಲ್ಲಿ, ಬಯೋಪೈಡ್ ರೋಗನಾಶಕ/ಕೀಟನಾಶಕ/ ಹಾರ್ಮೋನು ಇವುಗಳನ್ನು ಯಾವ ನೆಲೆಯಲ್ಲಿ ದೃಢೀಕರಣ ನೀಡಲಾಗಿದೆ; (ಪರೀಕ್ಷಾ ವರದಿ ಹಾಗೂ ಅಂಗೀಕೃತ ದೃಢೀಕರಣ ಪತ್ರದ ಪ್ರತಿ ನೀಡುವುದು)

(ಆ) ರೈತರು ಬಳಸುತ್ತಿರುವ ಬಯೋಪೈಡ್ ದ್ರಾವಣವು ಅನುಪಯುಕ್ತವಾದಲ್ಲಿ ಉತ್ಪಾದಕರು ಮತ್ತು ಸರಬರಾಜುದಾರರ ಮೇಲೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು; ಕ್ರಮ ಕೈಗೊಂಡಿದ್ದಲ್ಲಿ ಮಾಹಿತಿ ನೀಡುವುದು;

(ಇ) ಅನುಪಯುಕ್ತ ಬಯೋಪೈಡ್‌ನ್ನು ಬಳಸಿದ ರೈತರಿಗೆ ಪರಿಹಾರಧನ ನೀಡಲಾಗುವುದೇ; ಇಲ್ಲವಾದಲ್ಲಿ ಕಾರಣವೇನು;

(ಈ) ಬಯೋಪೈಡ್ ರೈತರಿಗೆ ಉಪಯುಕ್ತ ಎಂದಾದಲ್ಲಿ ಸಹಾಯಧನ ನೀಡಲಾಗುವುದೇ; ಇಲ್ಲವಾದಲ್ಲಿ ಕಾರಣವೇನು?

## ರಾಜ್ಯದಲ್ಲಿ ಕೃಷಿಗೆ ಬಳಸುವ ಪವರ್ ಟಿಲ್ಲರ್‌ಗೆ ನೋಂದಣಿ, ಕರ ವಿನಾಯಿತಿ ನೀಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩೪ (೮೩೭) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿಗೆ ಪೂರ್ಣ ಪ್ರಮಾಣದಲ್ಲಿ ಬಳಕೆಯಾಗುವ ಉಳುಮೆ ಯಂತ್ರಕ್ಕೆ (ಪವರ್ ಟಿಲ್ಲರ್) ನೋಂದಣಿ ಹಾಗೂ ಕರ ನೀಡುವ ಅಗತ್ಯತೆ ಇಲ್ಲದೆ ೨೫ ಅಶ್ವಶಕ್ತಿಯ ಟ್ರಾಕ್ಟರ್‌ಗಳಿಗೆ ನೋಂದಣಿ ಮತ್ತು ಕರವನ್ನು ವಿಧಿಸಿರುವ ಉದ್ದೇಶವೇನು;

(ಆ) ೨೫ ಅಶ್ವಶಕ್ತಿಯ ಟ್ರಾಕ್ಟರ್‌ಗಳಿಗೆ ನೋಂದಣಿ ಮತ್ತು ಕರದಿಂದ ವಿನಾಯಿತಿ ನೀಡುವ ಕುರಿತು ಸರ್ಕಾರ ಪರಿಶೀಲಿಸುವುದೇ; ಇಲ್ಲವಾದಲ್ಲಿ ಕಾರಣವೇನು?

## ರಾಜ್ಯದಲ್ಲಿ ಖಾಸಗಿ ಜಲವಿದ್ಯುತ್ ಸ್ಥಾವರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩೫ (೮೩೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಜಲವಿದ್ಯುತ್ ಉತ್ಪಾದನಾ ಘಟಕಗಳು ಎಷ್ಟು; ಅವು ಯಾವುವು; ಅವರು ಉತ್ಪಾದಿಸುವ ವಿದ್ಯುತ್ತಿನ ಪ್ರಮಾಣವೆಷ್ಟು; (ಘಟಕವಾರು ವಿವರ ನೀಡುವುದು)

(ಆ) ನವೀಕರಿಸಬಹುದಾದ ಇಂಧನದ ಮೂಲಗಳು ಯಾವುವು ಮತ್ತು ನವೀಕರಿಸಬಹುದಾದ ಇಂಧನ ಮೂಲಗಳಿಂದ ವಿದ್ಯುತ್ ಉತ್ಪಾದಿಸುವ ಖಾಸಗಿ ವಿದ್ಯುತ್ ಉತ್ಪಾದನಾ ಘಟಕಗಳು ಎಷ್ಟು ಅವು ಯಾವುವು; ಇವುಗಳು ಉತ್ಪಾದಿಸುವ ವಿದ್ಯುತ್ತಿನ ಪ್ರಮಾಣವೆಷ್ಟು? (ಘಟಕವಾರು ವಿವರ ನೀಡುವುದು)

## ರಾಜ್ಯದಲ್ಲಿ ಸಹಕಾರ ಸಂಘಗಳು ರೈತರಿಗೆ ನೀಡುತ್ತಿರುವ ವಿಶೇಷ ಸವಲತ್ತುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩೬ (೮೩೪) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರಿ ಸಂಘಗಳ ಮೂಲಕ ರೈತರಿಗೆ ನೀಡುತ್ತಿರುವ ವಿಶೇಷ ಸಹಾಯಧನ ಮತ್ತು ಸವಲತ್ತುಗಳು ಯಾವುವು;

(ಆ) ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ರೈತರಿಗೆ ಪಹಣಿ ಪತ್ರದೊಂದಿಗೆ ಬಂಗಾರ ಅಡಮಾನ ಸಾಲಕ್ಕೆ ೩% ರಿಂದ ೬%ವರೆಗೆ ಬಡ್ಡಿದರ ವಿಧಿಸುವಾಗ,

ಸಹಕಾರಿ ಸಂಘಗಳು ರೈತರು ಪಡೆಯುವ ಬಂಗಾರ ಅಡಮಾನ ಸಾಲಕ್ಕೆ ೧೬% ಬಡ್ಡಿ ವಿಧಿಸುವ ಔಚಿತ್ಯವೇನು; ಇದು ರೈತಪರ ನಿಲುವಾಗುವುದೇ; ಇದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ; ಇಲ್ಲವಾದಲ್ಲಿ ಕಾರಣವೇನು?

**ರಾಷ್ಟ್ರೀಯ ಹೆದ್ದಾರಿ–೬೬ರ ಚತುಷ್ಪತ ಕಾಮಗಾರಿ ಕುರಿತು**

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩೭ (೮೩೫) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುರತ್ಕಲ್‌ನಿಂದ ಕುಂದಾಪುರ ಹಾಗೂ ಕುಂದಾಪುರದಿಂದ ಕಾರವಾರಕ್ಕೆ ರಾಷ್ಟ್ರೀಯ ಹೆದ್ದಾರಿ–೬೬ರ ಚತುಷ್ಪತ ಕಾಮಗಾರಿಯ ಗುತ್ತಿಗೆಯನ್ನು ಪಡೆದ ಗುತ್ತಿಗೆದಾರರ ಸಂಸ್ಥೆ ಯಾವುದು; ಇವರಿಗೆ ಗುತ್ತಿಗೆಯನ್ನು ಪೂರ್ಣಗೊಳಿಸಲು ವಿಧಿಸಿದ ಕಾಲಮಿತಿಯೆಷ್ಟು; ಈ ಕಾಮಗಾರಿಯಲ್ಲಿನ ವಿಳಂಬಕ್ಕೆ ಕಾರಣವೇನು;

(ಆ) ಸುರತ್ಕಲ್‌ನಿಂದ ಕುಂದಾಪುರದವರೆಗಿನ ರಾಷ್ಟ್ರೀಯ ಹೆದ್ದಾರಿ–೬೬ರ ಚತುಷ್ಪತ ಕಾಮಗಾರಿ ಗುತ್ತಿಗೆ ಪಡೆದ ಗುತ್ತಿಗೆದಾರರ ಸಂಸ್ಥೆಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಎಷ್ಟು ಕಡೆ ಕರಸಂಗ್ರಹ ಕೇಂದ್ರ (ಟೋಲ್‌ಗೇಟ್) ನಿರ್ಮಿಸಲು ಅನುಮತಿ ನೀಡಲಾಗಿದೆ; ಎಲ್ಲಿ ಕರಸಂಗ್ರಹ ಕೇಂದ್ರಗಳನ್ನು ನಿರ್ಮಿಸಲಾಗುವುದು;

(ಇ) ಕುಂದಾಪುರದಿಂದ ಕಾರವಾರದ ತನಕ ರಾಷ್ಟ್ರೀಯ ಹೆದ್ದಾರಿ–೬೬ರ ಚತುಷ್ಪತ ಕಾಮಗಾರಿ ಗುತ್ತಿಗೆ ಪಡೆದ ಗುತ್ತಿಗೆದಾರ ಸಂಸ್ಥೆಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಎಷ್ಟು ಕಡೆ ಕರಸಂಗ್ರಹ ಕೇಂದ್ರ (ಟೋಲ್‌ಗೇಟ್) ನಿರ್ಮಿಸಲು ಅನುಮತಿ ನೀಡಲಾಗಿದೆ; ಎಲ್ಲೆಲ್ಲಿ ಈ ಕರಸಂಗ್ರಹ ಕೇಂದ್ರಗಳನ್ನು ನಿರ್ಮಿಸಲಾಗುವುದು;

(ಈ) ಸದರಿ ಟೋಲ್‌ಗೇಟ್‌ಗಳಲ್ಲಿ ವಾಹನವಾರು ಎಷ್ಟು ಕರ ವಿಧಿಸಲಾಗುವುದು; ಈ ಟೋಲ್‌ಗೇಟ್‌ಗಳಲ್ಲಿ ಯಾವ ಯಾವ ವಾಹನಗಳಿಗೆ ಮತ್ತು ಯಾವ ಯಾವ ವ್ಯಕ್ತಿಗಳಿಗೆ ವಿನಾಯಿತಿ ನೀಡಲಾಗುವುದು? (ನಿಗದಿಪಡಿಸಿದ ಕರ ಮತ್ತು ವಿನಾಯಿತಿಯ ಆದೇಶ ಪ್ರತಿಯನ್ನು ನೀಡುವುದು)

## ರೈತ ಸಂಜೀವಿನಿ ಅಪಘಾತ ವಿಮಾ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩೮ (೮೯೮) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರೈತರಿಗಾಗಿ ಜಾರಿ ಇರುವ 'ರೈತ ಸಂಜೀವಿನಿ' ಅಪಘಾತ ವಿಮಾ ಯೋಜನೆಯು ರೈತರಲ್ಲಿನ ತಿಳುವಳಿಕೆ ಕೊರತೆ ಹಾಗೂ ರಾಜ್ಯ ಕೃಷಿ ಉತ್ಪನ್ನ ಮಾರಾಟ ಮಂಡಳಿಯ ಅಧಿಕಾರಿಗಳ ನಿರ್ಲಕ್ಷ್ಯ ಮತ್ತಿತರ ಕಾರಣಗಳಿಂದಾಗಿ ಬಳಕೆಯಾಗದೆ ನಿಷ್ಕ್ರಿಯೋಜಕವಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ಹಾಗಿದಲ್ಲಿ, ಸದರಿ ಯೋಜನೆಯನ್ನು ಪ್ರಚಾರಪಡಿಸಲು ಸರ್ಕಾರವು ಕೈಕೊಂಡ ಕ್ರಮಗಳೇನು; ಬೆಳಗಾವಿ ಜಿಲ್ಲೆಯಲ್ಲಿ ೨೦೧೧-೧೨, ೨೦೧೨-೧೩, ೨೦೧೩-೧೪, ೨೦೧೪-೧೫ ಹಾಗೂ ೨೦೧೫-೧೬ನೇ ಸಾಲಿಗೆ ಸದರಿ ಯೋಜನೆಗೆ ಬಿಡುಗಡೆಯಾದ ಅನುದಾನವೆಷ್ಟು; ಅದರಲ್ಲಿ ರೈತರಿಗೆ ನೀಡಲಾದ ಅನುದಾನವೆಷ್ಟು; ಬಾಕಿ ಉಳಿದಿರುವ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸದರಿ ಜಿಲ್ಲೆಯಲ್ಲಿ ೨೦೧೧-೧೨, ೨೦೧೨-೧೩, ೨೦೧೩-೧೪, ೨೦೧೪-೧೫ ಹಾಗೂ ೨೦೧೫-೧೬ನೇ

ಸಾಲಿನಲ್ಲಿ ಕೃಷಿ ಚಟುವಟಿಕೆ ಸಂದರ್ಭದಲ್ಲಿ ಎಷ್ಟು ಜನ ರೈತರು ಮೃತಪಟ್ಟಿದ್ದಾರೆ ಮತ್ತು ಎಷ್ಟು ಜನ ರೈತರು ಅಂಗವಿಕಲರಾಗಿದ್ದಾರೆ; ಎಷ್ಟು ಜನ ರೈತರಿಗೆ ವಿಮಾ ಮೊತ್ತ ನೀಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಮಾಹಿತಿ ಕೊರತೆಯಿಂದ ವಿಮಾ ಅನುದಾನ ಪಡೆಯದೆ ಇರುವ ರೈತರಿಗೆ ಸರ್ಕಾರವು ರಿಯಾಯಿತಿ ನೀಡಿ ಮೃತ ರೈತನ ಕುಟುಂಬಗಳಿಗೆ ವಿಮಾ ಅನುದಾನ ಮುಟ್ಟುವಂತೆ ಏನಾದರೂ ಕ್ರಮ ಜರುಗಿಸುವ ವಿಚಾರ ಸರ್ಕಾರದ ಮುಂದೆ ಇದೆಯೆ?

## ಸಕ್ಕರೆ ದರ ಕುಸಿತದಿಂದ ಸಕ್ಕರೆ ಕಾರ್ಖಾನೆಗಳಿಗೆ ತೊಂದರೆಯಾಗುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩೯ (೮೪೨) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಕ್ಕರೆ ದರ ಕುಸಿತದಿಂದಾಗಿ ಸಕ್ಕರೆ ಕಾರ್ಖಾನೆಗಳು ನಷ್ಟ ಅನುಭವಿಸುತ್ತಿದ್ದು ಮುಚ್ಚುವ ಬೀತಿಯಲ್ಲಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ೨೦೧೪–೧೫ನೇ ಸಾಲಿನಲ್ಲಿ ರಾಜ್ಯದಲ್ಲಿ ಉತ್ಪಾದನೆ ಮಾಡಲಾದ ಸಕ್ಕರೆ ದಾಸ್ತಾನು ಎಷ್ಟು;

(ಇ) ಸರ್ಕಾರವು ಕಾರ್ಖಾನೆಗಳಿಗೆ ಮಹಾರಾಷ್ಟ್ರ ಮಾದರಿಯ ಪ್ಯಾಕೇಜ್ ನೀಡುವ ವಿಚಾರ ಸರ್ಕಾರದ ಮುಂದೆ ಇದೆಯೇ;

(ಈ) ಸರ್ಕಾರವು ರೈತರಿಗೆ ನೀಡಬೇಕಾದ ಎಕ್ಸ್‌ಮಿಲ್ ದರವನ್ನು ಕಾರ್ಖಾನೆಗಳಿಗೆ ನಿಗದಿಪಡಿಸಿದೆಯೇ?

## ರಾಜ್ಯದ ವ್ಯಾಪ್ತಿಯಲ್ಲಿನ ರಾಷ್ಟ್ರೀಯ ಹೆದ್ದಾರಿಗಳ ಮೇಲಿರುವ ಟೋಲ್ ಸಂಗ್ರಹಣಾ ಕೇಂದ್ರಗಳ ಮಾಹಿತಿ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೬೪೦ (೮೪೩) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಒಟ್ಟು ಟೋಲ್ ಸಂಗ್ರಹಣಾ ಕೇಂದ್ರಗಳ ಸಂಖ್ಯೆಗಳೆಷ್ಟು; ಅವುಗಳು ಯಾವ ಯಾವ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿವೆ;

(ಆ) ಟೋಲ್ ಸಂಗ್ರಹಣಾ ಕೇಂದ್ರವನ್ನು ಗುತ್ತಿಗೆ ಪಡೆದವರ ಹೆಸರು, ಟೆಂಡರ್‌ನ ಮೊತ್ತ ಮತ್ತು ಯಾವ ಅವಧಿಯವರೆಗೆ ಟೆಂಡರ್ ವಹಿಸಲಾಗಿದೆ; (ಎಲ್ಲ ಟೋಲ್ ಸಂಗ್ರಹಣಾ ಕೇಂದ್ರಗಳ ಮಾಹಿತಿ ನೀಡುವುದು)

(ಇ) ಈ ಟೋಲ್ ಸಂಗ್ರಹಣಾ ಕೇಂದ್ರಗಳ ಪೈಕಿ ಯಾವ ಯಾವ ಕೇಂದ್ರದ ಟೆಂಡರ್‌ದಾರರ ಮೇಲೆ ದೂರುಗಳು ದಾಖಲಾಗಿವೆ;

(ಈ) ಅಂತಹವರ ವಿರುದ್ಧ ಯಾವ ಕಾನೂನು ಕ್ರಮ ಕೈಗೊಳ್ಳಲಾಗಿದೆ?

## ರಾಜ್ಯದಲ್ಲಿನ ವಿದ್ಯುತ್ ಸಂಪರ್ಕ ರಹಿತ ಕುಟುಂಬಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೪೧ (೮೪೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿದ್ಯುತ್ ಸಂಪರ್ಕ ರಹಿತ ಕುಟುಂಬಗಳು ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ವಿದ್ಯುತ್ ರಹಿತ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ನೀಡುವ ಸಲುವಾಗಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಅರಣ್ಯ ಪ್ರದೇಶದ ಗ್ರಾಮಗಳಲ್ಲಿರುವ ಮನೆಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸುವ ವಿಕೇಂದ್ರಿತ ವಿದ್ಯುತ್ ಸರಬರಾಜು ಯೋಜನೆ ರಾಜ್ಯದಲ್ಲಿ ಯಾವ ಯಾವ ಭಾಗದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ;

(ಈ) ವಿಕೇಂದ್ರಿತ ವಿದ್ಯುತ್ ಸರಬರಾಜು ಯೋಜನೆ ಅನುಷ್ಠಾನ ಹಿನ್ನಡೆಯಾಗಲು ಕಾರಣವೇನು ; (ಸಂಪೂರ್ಣ ವಿವರ ನೀಡುವುದು)

(ಉ) ವಿದ್ಯುತ್ ಸಂಪರ್ಕ ಪಡೆಯುಲು ಗ್ರಾಮ ಪಂಚಾಯತ್ ನಿರಾಪೇಕ್ಷಣಾ ಪತ್ರ ಕಡ್ಡಾಯವೇ ; ಈ ಸಂಬಂಧ ಹೊರಡಿಸಿರುವ ಆದೇಶದ ಪ್ರತಿ ಸಲ್ಲಿಸುವುದು ?

**ರಾಷ್ಟ್ರೀಯ ಹೆದ್ದಾರಿ ಕುರಿತು**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೪೨ (೮೪೬) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಮೂಲಕ ಎಷ್ಟು ರಾಷ್ಟ್ರೀಯ ಹೆದ್ದಾರಿಗಳು ಹಾದು ಹೋಗಿವೆ; ಅವು ಯಾವುವು; (ಹೆಸರು–ರಸ್ತೆಯ ಉದ್ದ–ಸಂಪರ್ಕಿಸುವ ಪ್ರದೇಶಗಳ ವಿವರ ನೀಡುವುದು)

(ಆ) ಸದರಿ ರಸ್ತೆಗಳನ್ನು ರಾಜ್ಯದಲ್ಲಿ ಯಾವ ಪ್ರಾಧಿಕಾರ ಅಥವಾ ಇಲಾಖೆ ನಿರ್ವಹಿಸುತ್ತಿದೆ; (ವಿವರ ನೀಡುವುದು)

(ಇ) ಪ್ರಮುಖ ರಾಷ್ಟ್ರೀಯ ಹೆದ್ದಾರಿಗಳಲ್ಲೊಂದಾದ ಶಿರಾಡಿ ಘಾಟ್ ದುರಸ್ಥಿಗೆ ಆಗಿರುವ ಒಟ್ಟು ವೆಚ್ಚ ವೆಷ್ಟು; (ಯೋಜನೆಯ ಸಂಪೂರ್ಣ ವಿವರ ನೀಡುವುದು)

(ಈ) ಶಿರಾಡಿ ಘಾಟ್ ಮಾರ್ಗವನ್ನು ಚತುಷ್ಪಥ ಮಾಡಲು ಇರುವ ತೋಡಕುಗಳೇನು; (ವಿವರ ನೀಡುವುದು)

(ಉ) ರಾಜ್ಯದಲ್ಲಿರುವ ಇತರೆ ರಾಷ್ಟ್ರೀಯ ಹೆದ್ದಾರಿ ಮತ್ತು ಘಾಟ್ ರಸ್ತೆಗಳನ್ನು ಟೋಲ್ (ಶುಲ್ಕ) ಸಂಗ್ರಹದ ಮೂಲಕ ದುರಸ್ಥಿಗೊಳಿಸುವ ನಿರ್ಧಾರ ಸರ್ಕಾರ ಹೊಂದಿದೆಯೇ ? (ವಿವರ ನೀಡುವುದು)

## ಗ್ರಾಮ ಪಂಚಾಯತ್‌ಗಳಿಗೆ "ಪವರ್ ಸಬ್ಸಿಡಿ" ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೪೩ (೯೦೧) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ)ಇಂಧನ ಇಲಾಖೆಯಿಂದ ಶೇ.೧೦೦ ವಿದ್ಯುತ್ ಬಿಲ್ಲು ಪಾವತಿಸುವ ಗ್ರಾಮ ಪಂಚಾಯತ್‌ಗಳಿಗೆ "ಪವರ್ ಸಬ್ಸಿಡಿ" ಸಹಾಯಧನ ಪಾವತಿಸಲಾಗುತ್ತಿದೆಯೆ; ಈ ಸಂಬಂಧ ಹೊರಡಿಸಿರುವ ಎಲ್ಲಾ ಆದೇಶ ಪ್ರತಿಗಳನ್ನು ನೀಡುವುದು;

(ಆ) ಇದುವರೆಗೂ ಯಾವ ಗ್ರಾಮ ಪಂಚಾಯತ್‌ಗಳಿಗೆ "ಪವರ್ ಸಬ್ಸಿಡಿ" ವಿತರಿಸಲಾಗಿದೆ; ಪಾವತಿಸಿರುವ ಒಟ್ಟು ಮೊತ್ತ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಶೇ.೧೦೦ ವಿದ್ಯುತ್ ಬಿಲ್ಲು ಪಾವತಿಸುವ ಗ್ರಾಮ ಪಂಚಾಯತ್‌ಗಳಿಗೆ ಶೇ.೨೫ ರಷ್ಟು ಸಹಾಯಧನ "ಪವರ್ ಸಬ್ಸಿಡಿ" ನೀಡಲು ಸರ್ಕಾರಕ್ಕೆ ಇರುವ ತೊಡುಕುಗಳೇನು;

(ಈ) ಶೇ.೧೦೦ ವಿದ್ಯುತ್ ಬಿಲ್ಲು ಪಾವತಿಸುವ ಗ್ರಾಮ ಪಂಚಾಯತ್‌ಗಳಿಗೆ ಪ್ರೋತ್ಸಾಹ ನೀಡುವ ಸಲುವಾಗಿ ಶೇ.೨೫ ರಷ್ಟು ಸಹಾಯಧನ ನೀಡುವ ಸಲುವಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು? (ಸಂಪೂರ್ಣ ವಿವರ ನೀಡುವುದು)

## ನಂದಿನಿ ಮಾರಾಟ ಮಳಿಗೆ ತೆರೆಯುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೪೪ (೯೦೨) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಹಾಲು ಉತ್ಪಾದಕ ಸಂಘಗಳು ಎಷ್ಟು; ಅವುಗಳಿಗೆ ಸರ್ಕಾರದಿಂದ ಸಿಗುತ್ತಿರುವ ಸೌಲಭ್ಯಗಳು ಯಾವುವು;

(ಆ) ಕರ್ನಾಟಕ ಹಾಲು ಉತ್ಪಾದಕ ಸಂಘಗಳ ಮೂಲಕ ದಿನ ನಿತ್ಯ ಸಂಗ್ರಹವಾಗುವ ಒಟ್ಟು ಹಾಲಿನ ಪ್ರಮಾಣ ಎಷ್ಟು; ಹಾಗೂ ಅವುಗಳಿಗೆ ಸರ್ಕಾರದಿಂದ ನೀಡುತ್ತಿರುವ ಸಬ್ಸಿಡಿ ಸಹಾಯ ಧನ ಎಷ್ಟು;

(ಇ) ರಾಜ್ಯದಲ್ಲಿ ಎಷ್ಟು ನಂದಿನಿ ಮಾರಾಟ ಮಳಿಗೆಗಳು ಕಾರ್ಯನಿರ್ವಹಿಸುತ್ತಿವೆ;

(ಈ) ರಾಜ್ಯದಲ್ಲಿ ಅಗತ್ಯಕ್ಕೆ ತಕ್ಕಂತೆ " ನಂದಿನಿ" ಮಾರಾಟ ಮಳಿಗೆಗಳು ಇಲ್ಲದೇ ಇರುವುದರಿಂದ ರಾಜ್ಯದ ಎಲ್ಲಾ ಪ್ರದೇಶಗಳಲ್ಲಿ ಮಾರಾಟ ಮಳಿಗೆ ಸ್ಥಾಪಿಸಲು ಸರ್ಕಾರಕ್ಕಿರುವ ತೊಡಕುಗಳೇನು; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಅಲ್ಪ ಸಂಖ್ಯಾತರ ವಸತಿ ನಿಲಯದ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೪೫ (೯೦೩) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲ್ಪ ಸಂಖ್ಯಾತರ ಇಲಾಖೆಯಡಿ ಇರುವ ವಸತಿ ನಿಲಯದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಊಟ, ಹಾಸಿಗೆ, ವೈದ್ಯಕೀಯ, ಪುಸ್ತಕ, ಲೇಖನ ಸಾಮಗ್ರಿ, ಸಮವಸ್ತ್ರ, ಕ್ರೀಡಾ ಸಾಮಗ್ರಿಗಳಿಗೆ ಹಾಗೂ ಇತರೇ ವೆಚ್ಚವಾಗಿ. ಮಾಸಿಕ ಎಷ್ಟು ತಲಾ ಅನುದಾನ ನಿಗದಿ ಮಾಡಲಾಗಿದೆ;

(ಆ) ಅಲ್ಪ ಸಂಖ್ಯಾತರ ಇಲಾಖೆಯಡಿ ಲಭ್ಯವಿರುವ ಯೋಜನೆ ಮತ್ತು ಸೌಲಭ್ಯಗಳೇನು; (ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಅಲ್ಪ ಸಂಖ್ಯಾತರ ವಿದ್ಯಾರ್ಥಿಗಳಿಗೆ ವಿವಿಧ ಕೋರ್ಸುಗಳಿಗೆ ನಿಗಧಿ ಪಡಿಸಿರುವ ವಿದ್ಯಾರ್ಥಿವೇತನ ಎಷ್ಟು; ವಾರ್ಷಿಕ ಗುರಿ ಎಷ್ಟು; (ಭೌತಿಕ ಮತ್ತು ಆರ್ಥಿಕ ಗುರಿ)

(ಈ) ಲಭ್ಯ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಹಾಗೂ ಪಾರದರ್ಶಕವಾಗಿ ಫಲಾನುಭವಿಗಳಿಗೆ ಆಯ್ಕೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಹೊಸ ಸಕ್ಕರೆ ಕಾರ್ಖಾನೆಗೆ ಲೈಸನ್ಸ್ ನೀಡಿದ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೭೪೬ (೮೪೭) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಹೊಸ ಸಕ್ಕರೆ ಕಾರ್ಖಾನೆ ಸ್ಥಾಪಿಸಲು ಅನುಮತಿ ನೀಡಿದ ಸಂಗತಿ ನಿಜವೇ;

(ಆ) ಹಾಗಿದ್ದಲ್ಲಿ, ಎಷ್ಟು ಸಕ್ಕರೆ ಕಾರ್ಖಾನೆಗಳಿಗೆ ಅನುಮತಿ ನೀಡಿರುತ್ತದೆ; (ಕಾರ್ಖಾನೆಗಳ ಹೆಸರು, ಮಾಲೀಕರ ಹೆಸರು, ವಿಳಾಸ ನೀಡುವುದು)

(ಇ) ಈಗಿರುವ ಸಕ್ಕರೆ ಕಾರ್ಖಾನೆಗಳು ನಷ್ಟದಲ್ಲಿ ಇರುವಾಗ ಹೊಸ ಕಾರ್ಖಾನೆಗಳನ್ನು ಪ್ರಾರಂಭಿಸಲು ಅನುಮತಿ ನೀಡುವುದು ಸಮಂಜಸವೇ;

(ಈ) ಹೊಸ ಕಾರ್ಖಾನೆ ಪ್ರಾರಂಭಿಸಲು ಅನುಮತಿ ನೀಡುವ ಉದ್ದೇಶವೇನು?

**ರೈತರ ಕಬ್ಬಿನ ಬಿಲ್ಲನ್ನು ಕೊಡಲು ಕ್ರಮ ಕೈಗೊಂಡಿರುವ ಬಗ್ಗೆ**

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೬೪೭ (೮೫೦) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಕಬ್ಬಿನ ಬಾಕಿ ಹಣವನ್ನು ಕೊಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ಕಾರ್ಖಾನೆಯವರು ನಿಗದಿತ ವೇಳೆಯಲ್ಲಿ ಕಬ್ಬು ಪೂರೈಸಿದ ರೈತರಿಗೆ (ಹದಿನಾಲ್ಕು ದಿನಗಳೊಳಗಾಗಿ) ಹಣ ಪಾವತಿ ಮಾಡಬೇಕು ಇಲ್ಲವಾದಲ್ಲಿ ಬಡ್ಡಿ ಸಮೇತ ಹಣ ಕೊಡಬೇಕು ಎಂದು ನಿಯಮ ಇದ್ದರೂ ಕಾರ್ಖಾನೆಯವರು ರೈತರಿಗೆ ಬಡ್ಡಿ ಕೊಡದೆ ಇರುವುದಕ್ಕೆ ಕಾರಣವೇನು;

(ಇ) ಜಿಲ್ಲಾಧಿಕಾರಿಗಳು ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಎಷ್ಟು ರೈತರಿಗೆ ಬಡ್ಡಿ ಕೊಡಿಸಿರುವರು? ( ಮಾಹಿತಿ ನೀಡುವುದು)

## ಬೆಳಗಾವಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಶಾಸಕರ ಭವನ ನಿರ್ಮಾಣಕ್ಕೆ ಪ್ರಸ್ತಾವ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೭೪೮ (೮೪೮) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಧಾನ ಸಭೆಯ ಮಾನ್ಯ ಸಭಾಧ್ಯಕ್ಷರು ಬೆಳಗಾವಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಶಾಸಕರ ಭವನ ನಿರ್ಮಿಸುವ ಪ್ರಸ್ತಾವನೆಯನ್ನು ಕಳುಹಿಸಲಾಗಿದೆಯೇ; ಸದರಿ ಸರ್ಕಾರಕ್ಕೆ ಕಳುಹಿಸಿದ ಪ್ರಸ್ತಾವನೆ ಯಾವ ಹಂತದಲ್ಲಿ ಇರುವುದು;

(ಆ) ಮಾನ್ಯ ಸಭಾಧ್ಯಕ್ಷರು ಎಷ್ಟು ಕೊಠಡಿಗಳ ಶಾಸಕರ ಭವನ ಕಟ್ಟಬೇಕು ಎಂದು ಸೂಚಿಸಿರುವರು;

(ಇ) ಲೋಕೋಪಯೋಗಿ ಇಲಾಖೆಯಿಂದ ಅಂದಾಜು ವೆಚ್ಚ ಪತ್ರಿಕೆ ತಯಾರಿಸಲಾಗಿದೆಯೇ ಹಾಗೂ ಇದಕ್ಕೆ ಎಷ್ಟು ವೆಚ್ಚ ತಗಲುವುದು;

(ಈ) ಸದಸ್ಯರಿಗೆ ಹೊಟೇಲ್‌ಗಳಲ್ಲಿ ಉಳಿಯುವುದರಿಂದ ತುಂಬಾ ತೊಂದರೆ ಆಗುತ್ತಿರುವುದರಿಂದ ಹಾಗೂ ಸರ್ಕಾರದ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಬೀಳುತ್ತಿರುವುದರಿಂದ ಕೂಡಲೇ ಶಾಸಕರ ಭವನ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

## ಕೃಷಿ ಮಾರುಕಟ್ಟೆಯಲ್ಲಿ ಸುಧಾರಣೆ ತರುವ ಬಗ್ಗೆ

ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –

೭೪೯ (೮೫೧) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರಿಗೆ ಅನುಕೂಲವಾಗುವ ದೃಷ್ಟಿಯಿಂದ ಕೃಷಿ ಮಾರುಕಟ್ಟೆಯಲ್ಲಿ ಯಾವ ಯಾವ ಸುಧಾರಣೆ ತರಲಾಗಿದೆ;

(ಆ) ವ್ಯಾಪಾರಸ್ಥರು ರೈತರಿಂದ ಮಾರ್ಕೆಟ್ ಯಾರ್ಡ್‌ದಲ್ಲಿ ಖರೀದಿ ಮಾಡುವ ಬದಲು ಮಾರ್ಕೆಟ್ ಹೊರಗಡೆ ಖರೀದಿ ಮಾಡಿ ರೈತರಿಗೆ ಅನ್ಯಾಯ ಮಾಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಅದನ್ನು ತಡೆಯಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಗಡಿ ಭಾಗದ ಜನರು ರಾಜ್ಯದಲ್ಲಿ ಎ.ಪಿ.ಎಂ.ಸಿ ಸೆಸ್ಸು ಇತರೆ ಖರ್ಚು ಸೇಲ್ಸ್ ಟ್ಯಾಕ್ಸ್ ಹೆಚ್ಚಿಗೆ ಇರುವುದರಿಂದ ಮಹಾರಾಷ್ಟ್ರದಲ್ಲಿ ಸರಕು ಮಾರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಅದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗುವುದು?

**ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಸಹಾಯ ಮಾಡುವ ಬಗ್ಗೆ**

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೬೫೦ (೮೪೯) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಯಾವ ಯಾವ ಸಹಾಯ ಮಾಡಲಾಗುತ್ತಿದೆ;

(ಆ) ಪ್ರತಿಯೊಂದು ತಾಲ್ಲೂಕು ಕೇಂದ್ರದ ತೋಟಗಾರಿಕೆ ಇಲಾಖೆಯಲ್ಲಿ ಈ ಮೊದಲು ಶ್ರೀ ಮರಿಗೌಡ್ರು ತೋಟಗಾರಿಕೆ ಇಲಾಖೆಯ ನಿರ್ದೇಶಕರು ಇದ್ದಾಗ ಪ್ರತಿಯೊಂದು ಕೇಂದ್ರದಲ್ಲಿ ಹಣ್ಣಿನ ಹಾಗೂ ಹೂವಿನ ಗಿಡಗಳನ್ನು ಮಾರಲಾಗುತ್ತಿತ್ತು; ಈಗ ಅದನ್ನು ನಿಲ್ಲಿಸಲಾಗಿದ್ದು ಕಾರಣಗಳೇನು;

(ಇ) ಮನಃ ಅದನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

## ಶೂನ್ಯ ಬಡ್ಡಿದರದಲ್ಲಿ ರೈತರಿಗೆ ಸಾಲ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೫೧ (೮೫೨) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ೨೦೧೪–೨೦೧೫ನೇ ಸಾಲಿನಲ್ಲಿ ಎಷ್ಟು ರೈತರಿಗೆ ಶೂನ್ಯ ಬಡ್ಡಿದರದಲ್ಲಿ ಸಾಲ ವಿತರಿಸಲಾಗಿದೆ;

(ಆ) ಈ ಜಿಲ್ಲೆಯಲ್ಲಿ ೨೦೧೪–೧೫ನೇ ಸಾಲಿನಲ್ಲಿ ಯಾವ ಪ್ರಮಾಣದಲ್ಲಿ ಎಷ್ಟು ಸಾಲ ವಿತರಿಸಲಾಗಿದೆ; ಅದಕ್ಕೆ ವಿದಿಸಲಾದ ಬಡ್ಡಿ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಷ್ಟು ಜನರಿಗೆ ಯಾವ ಮೊತ್ತದ ಸಾಲ ವಿತರಿಸಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)

## ಜೆಸ್ಕಂ ವ್ಯಾಪ್ತಿಯಲ್ಲಿರುವ ಕಛೇರಿ ಸಿಬ್ಬಂದಿಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೫೨ (೮೫೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜೆಸ್ಕಂ ವ್ಯಾಪ್ತಿಯ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)

(ಆ) ಹೊಸದಾಗಿ ಸೃಜಿಸಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)

(ಇ) ಜೆಸ್ಕಾಂ ಕಛೇರಿಗಳ ನಿರ್ವಹಣೆಯಲ್ಲಿ ಖಾಯಂ ತಾಂತ್ರಿಕ ಸಿಬ್ಬಂದಿಗಳ ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಇದೆಯೆ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಕೃಷಿ ಯೋಜನೆಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೫೩ (೭೫೪) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕೃಷಿ ಇಲಾಖೆಯ ವತಿಯಿಂದ ಅನುಷ್ಠಾನಗೊಂಡ ಯೋಜನೆಗಳಾವುವು; ಅವುಗಳಿಗೆ ವೆಚ್ಚ ಮಾಡಿದ ಹಣವೇಷ್ಟು; (ಯೋಜನಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಇಲಾಖೆಯ ವತಿಯಿಂದ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಯೋಜನೆಗಳಾವುವು; ಅವುಗಳ ರೂಪರೇಷೆಗಳೇನು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಲೋಕೋಪಯೋಗಿ ಕಾಮಗಾರಿಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೫೪ (೭೫೬) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಲೋಕೋಪಯೋಗಿ ಇಲಾಖೆಯಿಂದ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ;

(ಆ) ಈ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; ಖರ್ಚಾದ ಅನುದಾನ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಹಜ್ ಯಾತ್ರೆ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೫೫ (೮೫೫) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೧-೧೨, ೨೦೧೨-೨೦೧೩ ಮತ್ತು ೨೦೧೩-೨೦೧೪ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಿಂದ ಹಜ್ ಯಾತ್ರೆಗೆ ಪ್ರಯಾಣ ಮಾಡಿದವರ ಸಂಖ್ಯೆ ಎಷ್ಟು; ಈ ಪ್ರಯಾಣಿಕರಲ್ಲಿ ಪ್ರತಿಯೊಬ್ಬರಿಗೆ ಸರ್ಕಾರ ಭರಿಸಿದ ಹಣ ಎಷ್ಟು;

(ಆ) ಕಳೆದ ೫ ವರ್ಷದಿಂದ ಹಜ್ ಯಾತ್ರಿಕರಿಗಾಗಿ ಬಜೆಟ್‌ನಲ್ಲಿ ಕಾಯ್ದಿರಿಸಿದ ಮೊತ್ತ ಎಷ್ಟು;

(ಇ) ಹಜ್ ಯಾತ್ರೆಯಲ್ಲಿ ಪ್ರಯಾಣಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಇದನ್ನು ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಹೊಸದಾಗಿ ರಚಿಸಲಾಗಿರುವ ಪಟ್ಟಣ ಪಂಚಾಯತ್‌ಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೬೫೬ (೮೫೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಹೊಸದಾಗಿ ರಚಿಸಲಾಗಿರುವ ಪಟ್ಟಣ ಪಂಚಾಯತ್‌ಗಳು ಯಾವುವು ;

(ಆ) ಇವುಗಳಿಗೆ ಒದಗಿಸಿರುವ ಅನುದಾನ ಎಷ್ಟು ?

## ರಾಜ್ಯದಲ್ಲಿನ ಸಿಮೆಂಟ್ ಉತ್ಪಾದನೆ ಹಾಗೂ ಮಾರಾಟದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೬೫೭ (೮೬೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಿಮೆಂಟ್ ಉತ್ಪಾದನೆಯಾಗುತ್ತಿದ್ದರೂ ನೆರೆ ರಾಜ್ಯಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣವೇನು ;

(ಇ) ಸಿಮೆಂಟ್ ದರ ಇಳಿಕೆ ಮತ್ತು ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ರೈತರ ಬೆಳೆಗೆ ಯೋಗ್ಯ ಬೆಲೆ ದೊರಕಿಸಿಕೊಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೬೫೮ (೮೬೧) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ತೋಟಗಾರಿಕೆ ಬೆಳೆಗೆ ರೈತರು ಹೆಚ್ಚು ಒಲವನ್ನು ತೋರಿಸುತ್ತಿದ್ದಾರೆ ಅವರು ಬೆಳೆಯುವ ಕೃಷಿ ಕ್ಷೇತ್ರ ಕೂಡಾ ಹೆಚ್ಚಾಗಿದೆ. ಆದರೆ ಬೆಳೆ ಫಸಲಿಗೆ ಯೋಗ್ಯ ಬೆಲೆ ದೊರಕದೇ ಇರುವುದರಿಂದ ತೊಂದರೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರೈತರು ಬೆಳೆದ ಹಣ್ಣು ತರಕಾರಿಗಳಿಗೆ ಲಾಭದಾಯಕ ಬೆಲೆಯನ್ನು ದೊರಕಿಸಿಕೊಡುವಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಇ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ರಫ್ತು ಮಾಡಲಾದ ಹಣ್ಣುಗಳ ಪ್ರಮಾಣ ಮತ್ತು ಹಣಕಾಸಿನ ಮೊತ್ತವೆಷ್ಟು? (ವಿವರವನ್ನು ಒದಗಿಸುವುದು)

## ಸಾವಯುವ ಗೊಬ್ಬರವೆಂದು ನಕಲಿ ಗೊಬ್ಬರ ಮಾರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್** (ಶಿಕ್ಷಕರ ಕ್ಷೇತ್ರ) –

೬೫೯ (೧೬೬೩) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸುಟ್ಟ ಕಸವನ್ನು ಎರೆ ಹುಳುವಿನ ಸಾವಯುವ ಗೊಬ್ಬರವೆಂದು ಕೆ.ಸಿ.ಡಿ.ಸಿ.ಯ ಚೀಲಗಳಲ್ಲಿ ತುಂಬಿ ಪ್ಯಾಕ್ ಮಾಡಿ ದುಬಾರಿ ಬೆಲೆಗೆ ರೈತರಿಗೆ ಮಾರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಂಗಳೂರಿನ ಸರ್ಜಾಪುರ ರಸ್ತೆಯ ದೊಡ್ಡಕನ್ನಹಳ್ಳಿ ಬಳಿಯ ಕೆ.ಸಿ.ಡಿ.ಸಿ ಯ (ಕರ್ನಾಟಕ ಸಾವಯುವ ಗೊಬ್ಬರ ಅಭಿವೃದ್ಧಿ ನಿಗಮ) ಗೊಬ್ಬರ ಚೀಲದಲ್ಲಿ ಸುಟ್ಟ ಕಸ ಪ್ಯಾಕ್ ಮಾಡುತ್ತಿರುವ ಸಮಯದಲ್ಲಿ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ್ದು, ಸರ್ಕಾರದ ಗಮನದಲ್ಲಿದೆಯೇ;

(ಇ) ಈ ಗೊಬ್ಬರ ಚೀಲಗಳು ಕೆ.ಸಿ.ಡಿ.ಸಿ ಗೆ ಸೇರಿದ್ದೇ ಅಥವಾ ನಕಲಿಯೇ ಎಂಬುದನ್ನು ಪರಿಶೀಲಿಸಿ ಈ ಪ್ರಕರಣದ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

## ರಾಜ್ಯದಲ್ಲಿರುವ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಬಿಡುಗಡೆಯಾದ ಅನುದಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೬೬೦ (೮೬೪) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ಆಯೋಗ ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಕೊಡಲಾದ ಅನುದಾನವೆಷ್ಟು;

(ಆ) ಕಳೆದ ೩ ವರ್ಷಗಳಲ್ಲಿ ಈ ಸಂಸ್ಥೆಗಳಿಂದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಖರ್ಚು ಮಾಡಲಾದ ಹಣವೆಷ್ಟು; ಅಲ್ಪಸಂಖ್ಯಾತರರಾಗಿ ಗುರುತಿಸಿರುವ ಎಲ್ಲಾ ವರ್ಗಗಳಿಗೆ ಹಂಚಿಕೆ ಮಾಡಲಾದ ಅನುದಾನವೆಷ್ಟು; (ವಿವರವನ್ನು ಜಿಲ್ಲಾವಾರು ಹಾಗೂ ವರ್ಗವಾರು ನೀಡುವುದು)

(ಇ) ಈವರೆಗೆ ಎರಡು ಸಂಸ್ಥೆಗಳ ಅಧ್ಯಕ್ಷರ ಹುದ್ದೆಯನ್ನು ಅಲಂಕರಿಸಿದ ವ್ಯಕ್ತಿಗಳು ಯಾರು? (ವರ್ಗವಾರು ವಿವರ ನೀಡುವುದು)

## ಲಾಲ್‌ಬಾಗ್ ಸಸ್ಯ ಉದ್ಯಾನದ ಭದ್ರತೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೬೬೧ (೮೬೫) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಹೆಸರುವಾಸಿಯಾಗಿರುವ ಲಾಲ್‌ಬಾಗ್ ಸಸ್ಯ ಉದ್ಯಾನವು ೨೪೦ ಎಕರೆ ವಿಸ್ತೀರ್ಣ ಹೊಂದಿದ್ದು, ೪ ದ್ವಾರಗಳಿದ್ದು, ಇದಕ್ಕೆ ಭದ್ರತೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಹಿಂದೆ ಲಾಲ್‌ಬಾಗಿನಲ್ಲಿ ಶ್ರೀಗಂಧ ಮರಗಳನ್ನು ಕತ್ತರಿಸಿ ಕಳವು ಮಾಡಲಾಗಿದ್ದು, ಭದ್ರತೆಯ ಕೊರತೆ ಬಗ್ಗೆ ಸರ್ಕಾರದ ಕ್ರಮವೇನು;

(ಇ) ಈ ಸಸ್ಯ ತೋಟಕ್ಕೆ ಪ್ರತಿನಿತ್ಯ ಸಾವಿರಾರು ಜನರು ದೇಶ ವಿದೇಶಗಳಿಂದ ಭೇಟಿ ನೀಡುತ್ತಿದ್ದು, ಸಸ್ಯ ತೋಟದ ಒಳಗಡೆ ಭದ್ರತೆ ಸಿಬ್ಬಂದಿಯ ಕೊರತೆಯಿಂದ ಕೆಲವು ಜನರು ಪಾರ್ಕಿನಲ್ಲಿ ಮದ್ಯಪಾನ ಮಾಡುವುದು ಜನರೊಂದಿಗೆ ಅಸಭ್ಯ ರೀತಿಯಿಂದ ವರ್ತಿಸುತ್ತಿರುವುದರಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಯುನ್ನು ತಡೆಯುಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ?

## ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನ ತೊಕ್ಕೊಟು–ಮುಡಿಪು ರಸ್ತೆಯನ್ನು ಚತುಷ್ಪಥ ರಸ್ತೆಯಾಗಿ ಪರಿವರ್ತಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೬೬೨ (೮೬೮) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯು ಮಂಗಳೂರು ತಾಲ್ಲೂಕಿನ ತೊಕ್ಕೂಟು–ಮುಡಿಪು ರಸ್ತೆಯು ಹತ್ತಾರು ಶಿಕ್ಷಣ ಸಂಸ್ಥೆಗಳು ಹಾಗೂ ಆಸ್ಪತ್ರೆಗಳ ಸಂಪರ್ಕ ಹೊಂದಿದ್ದು, ಈ ರಸ್ತೆಯಲ್ಲಿ ಪ್ರತಿನಿತ್ಯ ಸಾವಿರಾರು ವಾಹನಗಳು ಸಂಚರಿಸುತ್ತಿದ್ದು, ಈ ರಸ್ತೆಯು ಕಿರಿದಾಗಿರುವುದರಿಂದ ವಾಹನ ದಟ್ಟಣೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗಿದೆಯೇ;

(ಇ) ವಹಿಸಿದಲ್ಲಿ, ಯಾವ ಕಾಲಮಿತಿಯಲ್ಲಿ ಎಷ್ಟು ಅಂದಾಜು ಮೊತ್ತದಲ್ಲಿ ಪೂರ್ಣಗೊಳಿಸಲಾಗುವುದು ?

## ಕೃಷಿ ಭಾಗ್ಯ ಯೋಜನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೬೬೩ (೮೭೧) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಭಾಗ್ಯ ಯೋಜನೆಗೆ ೨೦೧೪–೧೫ನೇ ಸಾಲಿನ ಮುಂಗಡ ಪತ್ರದಲ್ಲಿ ನಿಗದಿಗೊಳಿಸಲಾದ ಮೊತ್ತವೆಷ್ಟು; ಸದರಿ ಯೋಜನೆಯಡಿ ಜಿಲ್ಲಾವಾರು ಯಾವ ದಿನಾಂಕದಂದು ಎಷ್ಟು ಹಣ ಬಿಡುಗಡೆಗೊಳಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಲ್ಲಿ ಪ್ರತಿ ಫಲಾನುಭವಿಗೆ ನೀಡಲಾಗುವ ಗರಿಷ್ಟ ಸಹಾಯಧನದ ಮೊತ್ತವೆಷ್ಟು; ರೈತರಿಗೆ ಕೃಷಿ ಭಾಗ್ಯ ಯೋಜನೆಯಡಿ ನೀಡುವ ಸವಲತ್ತುಗಳಾವುವು; (ವಿವರ ನೀಡುವುದು)

(ಇ) ಕೃಷಿ ಭಾಗ್ಯ ಯೋಜನೆಯ ಸಂಬಂಧ ಮಾರ್ಪಾಡು ಮಾಡಿದ ಮಾರ್ಗಸೂಚಿಯನ್ನು ಯಾವ ದಿನಾಂಕದಂದು ನೀಡಿದೆ;

(ಈ) ೨೦೧೪–೧೫ನೇ ಸಾಲಿನಲ್ಲಿ ಸದರಿ ಯೋಜನೆಗೆ ಆಯ್ಕೆಗೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು; ಸದರಿ ಸಾಲಿನಲ್ಲಿ ಯೋಜನೆಯನ್ನು ಪೂರ್ಣ ಉಪಯೋಗ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ) ಸದರಿ ಯೋಜನೆಯಡಿ

ಆಯ್ಕೆಯಾಗಿ ಯೋಜನೆಯನ್ನು ಅನುಷ್ಠಾನಗೊಳಿಸದೆ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಸದರಿ ಯೋಜನೆಯಲ್ಲಿ ಆಯ್ಕೆಗೊಂಡ ಫಲಾನುಭವಿಗಳ ಸಂಬಂಧ ಖಜಾನೆಯಿಂದ ಸಹಾಯಧನದ ಮೊತ್ತವನ್ನು ಇಲಾಖೆ ಪಡೆಯಲಾಗಿದೆಯೇ; ಸದರಿ ಸಾಲಿನಲ್ಲಿ ಉಪಯೋಗ ಮಾಡಿಕೊಳ್ಳದ ಫಲಾನುಭವಿಗಳ ಹೆಸರಿನಲ್ಲಿ ಖಜಾನೆಯಿಂದ ಪಡೆದು, ಇಲಾಖೆಯಲ್ಲಿ ಉಳಿದಿರುವ ಮೊತ್ತವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಸದರಿ ಸಾಲಿನಲ್ಲಿ ಆಯ್ಕೆಗೊಂಡು ಯೋಜನೆ ಅನುಷ್ಠಾನಗೊಳಿಸಿರುವ ಫಲಾನುಭವಿಗಳ ಪೈಕಿ ಎಷ್ಟು ಮಂದಿ ರೈತರಿಗೆ ಬ್ಯಾಂಕುಗಳಲ್ಲಿ ಸಾಲ ನೀಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಂಗಳೂರು–ಮೈಸೂರು ರಸ್ತೆ ಪರಿವರ್ತನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೬೬೪ (೮೭೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಮೈಸೂರು ರಸ್ತೆಯನ್ನು ೬ ಪಥದ ರಸ್ತೆಯನ್ನಾಗಿ ಪರಿವರ್ತಿಸಿ, ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮಾಡಲು ಸರ್ಕಾರ ಯೋಜನೆಯನ್ನು ರೂಪಿಸಿದೆಯೇ;

(ಆ) ಹಾಗಾದರೆ, ಸದರಿ ಯೋಜನೆಯ ರೂಪುರೇಷೆಗಳೇನು;

(ಇ) ಸದರಿ ಯೋಜನೆಯಲ್ಲಿ ರಾಮನಗರ–ಚನ್ನಪಟ್ಟಣ–ಮದ್ದೂರು–ಮಂಡ್ಯ ನಗರ ವ್ಯಾಪ್ತಿಯಲ್ಲಿ ಹೊರ ವರ್ತುಲ ರಸ್ತೆಯನ್ನು ನಿರ್ಮಿಸಲು ಯೋಜನೆಯಲ್ಲಿ ಸೇರಿಸಲಾಗುವುದೇ;

(ಈ) ಯೋಜನೆಯ ಒಟ್ಟು ಅಂದಾಜು ಮೊತ್ತವೆಷ್ಟು;

(ಉ) ಸದರಿ ಯೋಜನೆ ಯಾವ ಹಂತದಲ್ಲಿದೆ;

(ಊ) ಸದರಿ ಯೋಜನೆಯ ಕಾಲಮಿತಿ ಎಷ್ಟು?

## ಮುಸ್ಲಿಂ ವಸತಿ ಶಾಲೆಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೬೬೫ (೮೬೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮುಸ್ಲಿಂ ವಸತಿ ಶಾಲೆಗಳ ಸಂಖ್ಯೆ ಎಷ್ಟು; ಯಾವ ಸಾಲಿನಿಂದ ಪ್ರಾರಂಭಿಸಲಾಗಿದೆ;

(ಆ) ಸದರಿ ಶಾಲೆಗಳಲ್ಲಿನ ಬೋಧಕ/ಬೋಧಕೇತರರ ಸಂಖ್ಯೆ ಎಷ್ಟು;

(ಇ) ಸದರಿ ಬೋಧಕ/ಬೋಧಕೇತರರನ್ನು ಎಂದಿನಿಂದ ಖಾಯಂಗೊಳಿಸಲಾಗಿದೆ;

(ಈ) ಸದರಿ ಶಾಲೆಯ ಬೋಧಕ/ಬೋಧಕೇತರರ ಹುದ್ದೆಗಳನ್ನು ಯಾವ ಇಲಾಖೆಯಲ್ಲಿಯೂ ವಿಲೀನಗೊಳಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಾದರೆ, ಸದರಿ ಬೋಧಕ/ಬೋಧಕೇತರರ ಹುದ್ದೆಗಳನ್ನು ಯಾವ ಇಲಾಖೆಯಲ್ಲಿ, ಯಾವ ಸಮಯದಲ್ಲಿ ವಿಲೀನಗೊಳಿಸಲಾಗುವುದು;

(ಊ) ನೇಮಕಗೊಂಡಿರುವ ಬೋಧಕ/ಬೋಧಕೇತರರಿಗೆ ಬಡ್ತಿ, ತುಟ್ಟಿ ಭತ್ಯೆ, ರಜಾ, ಪಿಂಚಣಿ ಹಾಗೂ ಇತರೆ ಸವಲತ್ತುಗಳನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುವುದು?

## ಶಿರಾಡಿ ಘಾಟ್ ರಸ್ತೆಯ ದುರಸ್ತಿ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೬೬೬ (೮೭೫) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿರಾಡಿ ಘಾಟ್ ರಸ್ತೆಯ ದುರಸ್ತಿ ಯಾವಾಗ ಪೂರ್ಣಗೊಳ್ಳುವುದು; ಈ ಕಾಮಗಾರಿಯು ಯಾವ ಹಂತದಲ್ಲಿದೆ;

(ಆ) ಶಿರಾಡಿ ಘಾಟ್ ದುರಸ್ತಿಗಾಗಿ ಈವರೆಗೂ ಬಿಡುಗಡೆಗೊಳಿಸಿದ ಅನುದಾನ ಎಷ್ಟು;

(ಇ) ಶಿರಾಡಿ ಘಾಟ್ ದುರಸ್ತಿ ಕಾರ್ಯವು ನಿಗದಿತ ಸಮಯದಲ್ಲಿ ಪ್ರಾರಂಭಿಸದೇ ಇರುವುದರಿಂದ ಬದಲಿ ವ್ಯವಸ್ಥೆ ಮಾಡದೇ ಮಂಗಳೂರು–ಬೆಂಗಳೂರು ಮಧ್ಯೆ ಸಂಚಾರದಲ್ಲಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಮಂಗಳೂರು–ಬೆಂಗಳೂರು ಸಂಚಾರಕ್ಕೆ ಬದಲಿ ವ್ಯವಸ್ಥೆ ರಸ್ತೆಯು ಏಕಮುಖ ರಸ್ತೆಯಾಗಿದ್ದು, ಈ ರಸ್ತೆಯಲ್ಲಿ ಸಂಚಾರ ನಡೆಸಲು ಆಗದೇ ಇರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಪೂರ್ವ ತಯಾರಿ ಮಾಡದೇ ಕಾಮಗಾರಿ ನಿಧಾನಗತಿಯಲ್ಲಿ ನಡೆಯುತ್ತಿರುವುದರಿಂದ ಸಾರ್ವಜನಿಕರ ತೊಂದರೆ ನಿಭಾಯಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಭತ್ತದ ಕೃಷಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೬೬೭ (೮೭೪) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟರ್‌ಗಳಲ್ಲಿ ಭತ್ತದ ಕೃಷಿಯನ್ನು ಬೆಳೆಯಲಾಗುತ್ತಿದೆ; ಈ ಬೆಳೆಗೆ ಪ್ರೋತ್ಸಾಹಿಸಲು ಸರ್ಕಾರ ಕೈಗೊಳ್ಳುತ್ತಿರುವ ಕಾರ್ಯಕ್ರಮಗಳೇನು?

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಭತ್ತ ಬೆಳೆಯಲಾಗುತ್ತಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಭತ್ತದ ಕೃಷಿಯನ್ನು ಬೆಳೆಯುವ ರೈತರಿಗೆ ಸರ್ಕಾರದಿಂದ ಪ್ರೋತ್ಸಾಹ ಧನ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ;

(ಈ) ಭತ್ತದ ಕೃಷಿ ಬೆಳೆಯು ಕಡಿಮೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದರೆ, ತೆಗೆದುಕೊಂಡ ಕ್ರಮಗಳೇನು?

## "ಅಡಿಕೆ ಬೆಳೆಗಾರ ಮಂಡಳಿ ರಚನೆ" ಮಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೬೬೮ (೮೭೨) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಬೆಳೆಗಾರರ ಬೆಲೆ ನಿಗದಿ ಮತ್ತು ಬೆಳೆಗಾರರ ರಕ್ಷಣೆಗಾಗಿ "ಅಡಿಕೆ ಬೆಳೆಗಾರ ಮಂಡಳಿ ರಚನೆ" ಮಾಡಲು ಇಲಾಖೆ ಕ್ರಮಕೈಗೊಳ್ಳದೇ ಇರಲು ಕಾರಣವೇನು;

(ಆ) ರಾಜ್ಯದ ಪ್ರಮುಖ ಬೆಳೆಯಾಗಿರುವ ಅಡಿಕೆ ಧಾರಣೆಯನ್ನು ನಿಗದಿಪಡಿಸಲು ಇಲಾಖೆ ಕೈಗೊಂಡ ಕ್ರಮಗಳೇನು;

(ಇ) ಬೆಲೆ ಕುಸಿತದಿಂದ ಮತ್ತು ಬೆಳೆ ರೋಗಗಳಿಗೆ ತುತ್ತಾದಾಗ ಅಡಿಕೆ ಬೆಳೆಗಾರರಿಗೆ ರಕ್ಷಣೆ ನೀಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ;

(ಈ) ಅಡಿಕೆ ಉತ್ಪಾದನೆಗಳನ್ನು ಜನಪ್ರಿಯಗೊಳಿಸಲು ಮತ್ತು ಅಡಿಕೆಗೆ ಧಾರಣೆಯ ಕುಸಿತವನ್ನು ತಡೆಯಲು ಇಲಾಖೆ ಯಾವ ಯೋಜನೆ ಕೈಗೊಂಡಿದೆ? (ವಿವರ ನೀಡುವುದು)

## ಅಡಿಕೆ ಬೆಳೆಗಾರರ ಕೃಷಿ ಸಾಲ ಮನ್ನಾ ವಿಚಾರದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೬೬೯ (೮೭೩) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಬೆಳೆಗಾರರ ಬೆಳೆಯು ಹಳದಿ ರೋಗಕ್ಕೆ ತುತ್ತಾದಾಗ ರಾಜ್ಯದಿಂದ ನೀಡಿದ ಪರಿಹಾರ ಧನ ಎಷ್ಟು; ಎಷ್ಟು ರೈತರಿಗೆ ಪರಿಹಾರ ಧನ ವಿತರಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಅಡಿಕೆ ಬೆಳೆಗಾರರ ಕೃಷಿ ಸಾಲ ಮನ್ನಾ ವಿಚಾರದಲ್ಲಿ ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು; ಈ ಬಗ್ಗೆ ರಾಜ್ಯ ಸರ್ಕಾರದ ನಿಲುವನ್ನು ಕೇಂದ್ರ ಸರ್ಕಾರಕ್ಕೆ ತಿಳಿಸಲಾಗಿದೆಯೇ; (ವಿವರ ನೀಡುವುದು)

(ಇ) ಸರ್ವೋಚ್ಛ ನ್ಯಾಯಾಲಯದ ಬಗ್ಗೆ ರಾಜ್ಯ ಸರ್ಕಾರ ತೆಗೆದುಕೊಂಡ ನಿಲುವೇನು;

(ಈ) ರಾಜ್ಯದಲ್ಲಿ ೧೦ : ೦೦ ಎಕರೆಗಿಂತ ಕಡಿಮೆ ಅಡಿಕೆ ಬೆಳೆಗಾರರ ಸಾಲ ಮನ್ನಾ ಮಾಡಲು ಪ್ರಸ್ತಾವನೆಯಲ್ಲಿ ಎಷ್ಟು ಮೊತ್ತ ನಿಗದಿಪಡಿಸಲಾಗಿದೆ;

(ಉ) ಪ್ರಕೃತಿ ವಿಕೋಪದಿಂದ ನಾಶಗೊಂಡಿರುವ ಅಡಿಕೆ ಮರ ಒಂದಕ್ಕೆ ಪ್ರಸ್ತುತ ನೀಡುವ ಕನಿಷ್ಟ ಪರಿಹಾರ ಧನವೆಷ್ಟು;

(ಊ) ಅಡಿಕೆ ಮರ ಒಂದಕ್ಕೆ ಕನಿಷ್ಟ ದರ ರೂ.೩೦೦೦/-, ತೆಂಗಿನ ಮರ ಒಂದಕ್ಕೆ ರೂ.೫೦೦೦/- ನೀಡಲು ಇಲಾಖೆ ಕ್ರಮ ಕೈಗೊಳ್ಳುವುದೇ?

## ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ರಸ್ತೆಯ ಕಾಮಗಾರಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೬೭೦ (೮೭೬) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ರಸ್ತೆಯು ಮರಕಡದಿಂದ ವಿಮಾನ ನಿಲ್ದಾಣದವರೆಗೆ ೦೪ ಪಥ ರಸ್ತೆ ಕಾಮಗಾರಿಯು ಸ್ಥಗಿತಗೊಂಡಿರಲು ಕಾರಣವೇನು; ಈ ರಸ್ತೆ ಕಾಮಗಾರಿಯನ್ನು ಎಂದು ಕೈಗೊಳ್ಳಲಾಗುವುದು;

(ಆ) ವಿಮಾನ ನಿಲ್ದಾಣ ಸಂಪರ್ಕ ರಸ್ತೆಯ ಮರವೂರಿನಲ್ಲಿರುವ ಸೇತುವೆಯ ನಿರ್ಮಾಣಕ್ಕೆ ಎಷ್ಟು ಹಣ ಮೀಸಲಿಡಲಾಗಿದೆ; ಕಾಮಗಾರಿ ಯಾವಾಗ ಪ್ರಾರಂಭಗೊಳ್ಳುವುದು ; (ವಿವರ ನೀಡುವುದು)

(ಇ) ವಿಮಾನ ನಿಲ್ದಾಣ ಸಂಪರ್ಕ ಕಲ್ಪಿಸುವ ಕೆ.ಪಿ.ಟಿ. ಬಳಿಯ ಹೆದ್ದಾರಿ ಕ್ರಾಸ್‌ಗೆ ಅಂಡರ್ ಪಾಸ್ / ಮೇಲ್ಸೆತುವೆ ರಚಿಸಬೇಕೆಂಬ ಪ್ರಸ್ತಾವನೆಗೆ ಸರ್ಕಾರ ಕ್ರಮ ಕೈಗೊಳ್ಳದೆ ಇರಲು ಕಾರಣವೇನು;

(ಈ) ರಾಷ್ಟ್ರೀಯ ಹೆದ್ದಾರಿ ೬೬ ನಂತೂರು ಜಂಕ್ಷನ್ ಅವೈಜ್ಞಾನಿಕ ಸರ್ಕಲ್ ರಚನೆಯಿಂದಾಗಿ ಅಪಘಾತ ಸಂಭವಿಸುತ್ತಿದ್ದು, ಈ ರಸ್ತೆಯ ಕಾಮಗಾರಿ ಎಂದು ಪ್ರಾರಂಭಗೊಳ್ಳುವುದು?(ಈ ಬಗ್ಗೆ ಕೈಗೊಂಡ ಕ್ರಮದ ವಿವರ ನೀಡುವುದು)

## ಹನಿ ನೀರಾವರಿ ಪದ್ಧತಿ ಅಳವಡಿಸಿಕೊಂಡವರಿಗೆ ಸಹಾಯಧನ ಮಂಜೂರು ಮಾಡದಿರುವ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೬೭೧ (೮೭೭) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳ ಅವದಿಯಲ್ಲಿ ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡಿರುವ ಫಲಾನುಭವಿಗಳು ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಎಷ್ಟು ಫಲಾನುಭವಿಗಳಿಗೆ ಸಹಾಯ ಧನ ದೊರಕಿದೆ;

(ಇ) ಇನ್ನೂ ಎಷ್ಟು ಫಲಾನುಭವಿಗಳಿಗೆ ಸಹಾಯ ಧನ ದೊರಕಬೇಕಾಗಿರುತ್ತದೆ; ಈ ವಿಳಂಬಕ್ಕೆ ಕಾರಣಗಳೇನು; (ಮಾಹಿತಿ ನೀಡುವುದು)

(ಈ) ಕೇಂದ್ರ ಸರ್ಕಾರದಿಂದ ಬರಬೇಕಾಗಿರುವ ಸಹಾಯಧನ ಬಂದಿದ್ದರೂ ಸಹ ಇಲ್ಲಿಯವರೆಗೂ ಫಲಾನುಭವಿಗಳಿಗೆ ಸಹಾಯಧನ ನೀಡದೆ ಇರುವುದಕ್ಕೆ ಕಾರಣಗಳೇನು? (ಮಾಹಿತಿ ನೀಡುವುದು)

## ನಿಷೇಧಿಸಲಾಗಿರುವ ಕ್ರಿಮಿನಾಶಕಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೬೭೨ (೮೭೮) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ನಿಷೇಧಿಸಲಾಗಿರುವ ಕ್ರಿಮಿನಾಶಕಗಳು ಯಾವುವು;

(ಆ) ನಿಷೇಧಿಸಿರುವ ಕ್ರಿಮಿನಾಶಕಗಳ ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ನಗರೋತ್ಥಾನ ಯೋಜನೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೬೭೩ (೮೮೧) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರೋತ್ಥಾನ ಯೋಜನೆ ಜಾರಿಯಲ್ಲಿ ಇದೆಯೇ;

(ಆ) ಇದ್ದಲ್ಲಿ, ಈ ಯೋಜನೆಯಡಿ ಕೋಲಾರ-ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ವಿವಿಧ ಪಟ್ಟಣ ಪಂಚಾಯತಿ, ನಗರಸಭೆ, ಪುರಸಭೆಗಳಿಗೆ ಕಳೆದ ೨ ವರ್ಷಗಳಿಂದ ನೀಡಿರುವ ಅನುದಾನವೆಷ್ಟು; (ಮಾಹಿತಿ ನೀಡುವುದು)

(ಇ) ಸದರಿ ಅವಧಿಯಲ್ಲಿ ಅನುದಾನ ಇನ್ನೂ ವಿನಿಯೋಗಿಸದೆ ಇರುವ ಪ್ರಕರಣಗಳೆಷ್ಟು;

(ಈ) ಇವುಗಳಲ್ಲಿ ನಡೆದಿರುವ ಅವ್ಯವಹಾರ ಪ್ರಕರಣಗಳೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ವಿದ್ಯುತ್ ಶಕ್ತಿಯ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೬೭೪ (೮೭೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಮ್ಮ ರಾಜ್ಯದಲ್ಲಿ ಖಾಸಗಿ ಮತ್ತು ಸರ್ಕಾರಿ ಒಡೆತನದಲ್ಲಿ ಸೌರ ವಿದ್ಯುತ್ ಶಕ್ತಿಯ ಎಷ್ಟು ಘಟಕಗಳಿವೆ; ಅವುಗಳ ಉತ್ಪಾದನಾ ಸಾಮರ್ಥ್ಯ ಎಷ್ಟು; (ವಿವರ ನೀಡುವುದು)

(ಆ) ಸರ್ಕಾರದಿಂದ ಸೌರ ಹಾಗೂ ಪವನ ವಿದ್ಯುತ್ ಉತ್ಪಾದನಾ ಘಟಕಗಳನ್ನು ಸ್ಥಾಪಿಸುವ ಯೋಜನೆ ಇದೆಯೇ; (ವಿವರ ನೀಡುವುದು)

(ಇ) ಸೌರ ಹಾಗೂ ಪವನ ವಿದ್ಯುತ್ ಉತ್ಪಾದಿಸುವ ಖಾಸಗಿಯವರಿಗೆ ಸರ್ಕಾರದ ಪ್ರೋತ್ಸಾಹಕರ ಕಾರ್ಯಕ್ರಮಗಳೇನು?

## ಲೋಕೋಪಯೋಗಿ ಇಲಾಖಾ ವಸತಿ ಗೃಹಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೬೭೫ (೮೮೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ಲೋಕೋಪಯೋಗಿ ಇಲಾಖಾ ವ್ಯಾಪ್ತಿಯಲ್ಲಿರುವ ವಸತಿ ಗೃಹಗಳೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ವಸತಿ ಗೃಹಗಳನ್ನು ವಿತರಣೆ ಮಾಡಲು ಅನುಸರಿಸುವ ಮಾನದಂಡಗಳೇನು;

(ಇ) ವಸತಿ ಗೃಹಗಳು ಸರಿಯಾದ ನಿರ್ವಹಣೆ ಇಲ್ಲದೇ, ದುರಸ್ಥಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದರೆ, ವಸತಿ ಗೃಹಗಳ ಸುಸ್ಥಿತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ಬೆಂಗಳೂರು-ಮೈಸೂರು ರಸ್ತೆಯನ್ನು ೬ ಪಥವನ್ನಾಗಿ ಪರಿವರ್ತನೆ ಮಾಡುವ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೬೭೬ (೮೮೨) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು-ಮೈಸೂರು ರಸ್ತೆಯನ್ನು ೬ ಪಥ (ಷಟ್ಪಥ)ವನ್ನಾಗಿ ಪರಿವರ್ತನೆ ಮಾಡುವ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ ;

(ಆ) ಹಾಗಾದರೆ, ಆ ಯೋಜನೆಯನ್ನು ಯಾವಾಗ ಕಾರ್ಯಗತ ಮಾಡಲಾಗುವುದು ; ಯೋಜನೆಯ ಅನುಷ್ಠಾನ ಯಾವ ಹಂತದಲ್ಲಿದೆ ? (ಪೂರ್ಣ ವಿವರ ನೀಡುವುದು)

## ಗ್ರಾಮ ವಿದ್ಯುತ್ ಪ್ರತಿನಿಧಿಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೬೭೭ (೮೮೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ವಿದ್ಯುತ್ ಪ್ರತಿನಿಧಿಗಳ ಸಂಖ್ಯೆ ಎಷ್ಟು; ಇವರಿಗೆ ಎಷ್ಟು ಮಾಸಿಕ ವೇತನ ನೀಡಲಾಗುತ್ತಿದೆ;

(ಆ) ೨೦೧೩-೧೪ನೇ ಸಾಲಿನ ಆಯವ್ಯಯದಲ್ಲಿ ಸದರಿ ನೌಕರರನ್ನು ಖಾಯಂ ಮಾಡಿಸಬೇಕೆಂದು ಹೇಳಿರುವುದು ನಿಜವೇ;

(ಇ) ನಿಜವಾಗಿದ್ದಲ್ಲಿ, ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; ಇವರಿಗೆ ಮಾಸಿಕ ವೇತನ ಹೆಚ್ಚಿಸುವ ಬಗ್ಗೆ ಸರ್ಕಾರದ ನಿಲುವೇನು?

## ಹಾಸನ ಜಿಲ್ಲೆಯಲ್ಲಿ ಆಲೂಗೆಡ್ಡೆಗೆ ಅಂಗ ಮಾರಿರೋಗ ಎದುರಾಗಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೬೭೮ (೮೮೭) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಈ ಸಾಲಿನಲ್ಲಿ ಬಿತ್ತಿರುವ ಆಲೂಗೆಡ್ಡೆಗೆ ಅಂಗಮಾರಿ ರೋಗದ ಭೀತಿ ಎದುರಾಗಿರುವುದು ನಿಜವೇ;

(ಆ) ನಿಜವಾಗಿದ್ದಲ್ಲಿ, ನೀಡಿರುವ ಬಿತ್ತನೆ ಬೀಜದಲ್ಲಿ ಲೋಪವಿರುವುದು ಕಾರಣವೇ; ಈ ರೀತಿಯ ರೋಗ ಉಂಟಾಗಲು ಕಾರಣಗಳೇನು;

(ಇ) ಬಿತ್ತನೆ ಬೀಜದಲ್ಲಿ ಲೋಪವಿದ್ದಲ್ಲಿ, ಬಿತ್ತನೆ ಬೀಜ ನೀಡಿದ ಕಂಪನಿ ಯಾವುದು ಮತ್ತು ಅದರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ;

(ಈ) ಅಂಗಮಾರಿ ರೋಗವನ್ನು ತಡೆಗಟ್ಟಲು ರೈತರಿಗೆ ಯಾವ ರೀತಿಯ ಸಹಾಯಕ ನೀಡಲಾಗಿದೆ;

(ಉ) ಇದರಿಂದಾಗಿ ಹಾಸನ ಜಿಲ್ಲೆಯಲ್ಲಿ ಆಗಿರುವ ನಷ್ಟದ ಪ್ರಮಾಣವೇನು; ರೈತರಿಗೆ ಆಗಿರುವ ನಷ್ಟವನ್ನು ಭರಿಸಲು ಕ್ರಮ ಕೈಗೊಳ್ಳಲಾಗುವುದೆ; ಇಲ್ಲವಾದಲ್ಲಿ ಕಾರಣವೇನು?

## ಸಾವಯವ ಗೊಬ್ಬರದ ಅಭಿವೃದ್ಧಿ ನಿಗಮ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೬೭೯ (೮೮೪) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಸಿಡಿಸಿ ಕರ್ನಾಟಕ ಸಾವಯವ ಗೊಬ್ಬರ ಅಭಿವೃದ್ಧಿ ನಿಗಮವು ಖಾಸಗಿ ಕಂಪನಿಗಳಿಂದ ಸಾವಯವ ಗೊಬ್ಬರ ಖರೀದಿಸುತ್ತಿರುವುದು ನಿಜವೇ;

(ಆ) ಖರೀದಿಸಿದ ಗೊಬ್ಬರವನ್ನು ಹೇಗೆ ಬಳಸಿಕೊಳ್ಳಲಾಗುತ್ತಿದೆ; (ವಿವರ ನೀಡುವುದು)

(ಇ) ಇತ್ತೀಚೆಗೆ ಖರೀದಿಸಿದ ಗೊಬ್ಬರದಲ್ಲಿ ಸುಟ್ಟ ಕಸ ಸೇರಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುವುದು ನಿಜವೆ;

(ಈ) ನಿಜವಾಗಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ಕಳಪೆ ಬೀಜ ನೀಡುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೭೮೦ (೮೮೫) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಜಿಲ್ಲೆಯಲ್ಲಿ ಸುಮಾರು ೫೦ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬೆಳೆದ ಹತ್ತಿ ನಾಶವಾಗಿರುವುದು ನಿಜವೇ; ನಿಜವಾಗಿದ್ದಲ್ಲಿ, ಅದಕ್ಕೆ ಕಾರಣವೇನು;

(ಆ) ಕಳಪೆ ಬೀಜ ನೀಡಿ ರೈತರಿಗೆ ಅನ್ಯಾಯವಾಗಿರುವುದು ನಿಜವೆ; ನಿಜವಾಗಿದ್ದಲ್ಲಿ, ತೆಗೆದುಕೊಂಡ ಕ್ರಮವೇನು; (ವಿವರ ನೀಡುವುದು)

(ಇ) ರೈತರಿಗೆ ಆದ ನಷ್ಟಕ್ಕೆ ಪರಿಹಾರವೇನು; ಈ ಕುರಿತು ಸರ್ಕಾರದ ನಿಲುವೇನು?

## ರೈತರ ಆತ್ಮಹತ್ಯೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೭೮೧ (೮೮೮) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಸಾಲಬಾದೆ, ಬೆಳೆನಷ್ಟ ಇತ್ಯಾದಿ ಕಾರಣಗಳಿಂದಾಗಿ ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ರೀತಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಸರ್ಕಾರ ನೀಡಿರುವ ಪರಿಹಾರ ಎಷ್ಟು;

(ಇ) ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಹಾಗಿದ್ದರೆ, ಇದು ಯಾವಾಗ ಜಾರಿಗೆ ಬರುತ್ತದೆ? (ವಿವರ ನೀಡುವುದು)

## ರಾಜ್ಯ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೬೮೨ (೮೯೧) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಕೇಂದ್ರ ಸರ್ಕಾರ ರಾಜ್ಯದ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸಲು ಒಪ್ಪಿಗೆ ನೀಡಿರುವ ಯೋಜನೆಗಳಾವುವು; ಅದರ ವಿಸ್ತೀರ್ಣ ಎಷ್ಟು;

(ಆ) ಸದರಿ ಯೋಜನೆಗಳಿಗೆ ಕೇಂದ್ರದಿಂದ ಬರುತ್ತಿರುವ ನೆರವಿನ ಪ್ರಮಾಣ ಎಷ್ಟು;

(ಇ) ಈ ಯೋಜನೆಗಳ ಕಾಮಗಾರಿ ಕೆಲಸಗಳನ್ನು ಯಾವಾಗ ಪ್ರಾರಂಭಿಸಲಾಗಿದೆ; ಹಾಗೂ ಇದಕ್ಕೆ ಕಾಲಮಿತಿಯನ್ನು ನಿಗದಿಪಡಿಸಲಾಗಿದೆಯೇ? (ವಿವರ ನೀಡುವುದು)

## ವಿದ್ಯುತ್ ಸರಬರಾಜು ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೬೮೩ (೮೯೨) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಕ್ಕೆ ಪ್ರತಿದಿನ ಅಗತ್ಯವಿರುವ ಮತ್ತು ಸರಬರಾಜಾಗುತ್ತಿರುವ ವಿದ್ಯುತ್ ಎಷ್ಟು; ಇದರಲ್ಲಿ ಕೃಷಿ ಬಳಕೆಗೆ, ಗೃಹ ಹಾಗೂ ಕೈಗಾರಿಕೆಗಳಿಗೆ ಸರಬರಾಜಾಗುತ್ತಿರುವ ವಿದ್ಯುತ್ ಎಷ್ಟು;

(ಆ) ರಾಜ್ಯವು ಉತ್ಪಾದನೆ ಮಾಡುತ್ತಿರುವ ಹಾಗೂ ಇತರೆ ರಾಜ್ಯಗಳಿಂದ ಮತ್ತು ಕೇಂದ್ರದ ಗ್ರೀಡ್‌ಗಳಿಂದ ಪಡೆಯುತ್ತಿರುವ ವಿದ್ಯುತ್ ಎಷ್ಟು;

(ಇ) ಪ್ರತಿಯೊಂದು ಮೂಲದಿಂದ ಪಡೆಯುವ ವಿದ್ಯುತ್‌ಗೆ ನೀಡುತ್ತಿರುವ ದರ ಎಷ್ಟು? (ವಿವರ ನೀಡುವುದು)

## ತೋಟಗಾರಿಕಾ ಬಲವರ್ದನೆಗೆ ಯೋಜನೆಗಳು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೬೮೪ (೮೯೦) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೋಟಗಾರಿಕಾ ಕ್ಷೇತ್ರದ ಬಲಸಂವರ್ಧನೆಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು ; ಅನುಷ್ಠಾನಗೊಂಡ ಯೋಜನೆಗಳಾವುವು ; ಅನುಷ್ಠಾನಗೊಳ್ಳಬೇಕಾದ ಯೋಜನೆಗಳಾವುವು ;

(ಆ) ಸದರಿ ಯೋಜನೆಗಳ ಮೂಲಕ ಎಷ್ಟು ಪ್ರದೇಶಗಳಲ್ಲಿ ತೋಟಗಾರಿಕಾ ಬೆಳೆಗಳನ್ನು ಬೆಳೆಸಲು ಕ್ರಿಯಾಯೋಜನೆ ರೂಪಿಸಿ ಜಾರಿಗೊಳಿಸಲಾಗಿದೆ ;

(ಇ) ಈ ಯೋಜನೆಗಳಿಗೆ ಕಳೆದ ೧ ವರ್ಷದಿಂದ ಮಾಡಿರುವ ವೆಚ್ಚ ಎಷ್ಟು;

(ಈ) ತೋಟಗಾರಿಕಾ ಇಲಾಖೆಯ ವ್ಯಾಪ್ತಿಯಲ್ಲಿನ ಭೂಮಿಯ ಸದ್ಬಳಕೆ ಮಾಡಿಕೊಳ್ಳಲು ಮತ್ತು ಖಾಲಿ ಇರುವಂತ ಜಮೀನಿನಲ್ಲಿ ತೋಟಗಾರಿಕೆಯನ್ನು ಜನಪ್ರಿಯಗೊಳಿಸಲು ಸರ್ಕಾರ ಹಾಕಿಕೊಂಡಿರುವ ಕ್ರಮಗಳೇನು ?

## ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ನೀಡುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೬೮೫ (೮೮೯) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಬೆಳೆಗಳ ಬೆಲೆ ಕುಸಿತ ತಡೆಗೆ ಬೆಂಬಲ ಬೆಲೆ ನೀಡಲು ಪ್ರಸಕ್ತ ಸಾಲಿನಲ್ಲಿ ಸರ್ಕಾರ ಮೀಸಲಿಟ್ಟಿರುವ ಮೊತ್ತ ಎಷ್ಟು;

(ಆ) ಮೀಸಲಿಟ್ಟ ಮೊತ್ತದಿಂದ ಇದುವರೆವಿಗೂ ವೆಚ್ಚ ಮಾಡಿರುವ ಮೊತ್ತವೆಷ್ಟು;

(ಇ) ಕಳೆದ ಎರಡು ವರ್ಷಗಳಲ್ಲಿ ಯಾವ ಯಾವ ಬೆಳೆಗಳಿಗೆ ಎಷ್ಟು ಬೆಂಬಲ ಬೆಲೆಯನ್ನು ನೀಡಲಾಗಿದೆ?

## ಬೆಳಗಾವಿ ವಿಭಾಗದ ಜಿಲ್ಲೆಗಳ ಸೌಕರ್ಯದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೬೮೬ (೮೯೭) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಳಗಾವಿ ವಿಭಾಗದ ಜಿಲ್ಲೆಗಳಿಗೆ ಕಳೆದ ೨ ವರ್ಷಗಳಿಂದ ಸರ್ಕಾರ ಯಾವ ಯಾವ ಸವಲತ್ತು ನೀಡಿದೆ; (ತಾಲ್ಲೂಕುವಾರು ವಿವರ ನೀಡುವುದು)

ಆ) ಉತ್ತರ ಕರ್ನಾಟಕದ ಈ ಜಿಲ್ಲೆಗಳಿಗೆ ಹೆಚ್ಚಿನ ಸೌಲಭ್ಯ ನೀಡುವಂತೆ ಬೇಡಿಕೆ ಬಂದಿರುವುದು ನಿಜವೆ;

ಇ) ಹಾಗಿದ್ದಲ್ಲಿ, ಈ ವಿಭಾಗದ ಜಿಲ್ಲೆಗಳಿಗೆ ಹೆಚ್ಚಿನ ಅನುಕೂಲ ಮಾಡಿ ಕೊಡಲು ಹೊಸ ಯೋಜನೆಗಳನ್ನು ಮಾಡಲಾಗುವುದೇ;

ಈ) ಹಾಗಿದ್ದಲ್ಲಿ, ಯಾವ ಯಾವ ಯೋಜನೆ ಮಾಡಲಾಗಿದೆ?

## ಬೆಳಗಾವಿ ವಿಭಾಗದ ಹೊಸ ರಸ್ತೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೬೮೭ (೮೯೪) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಿಂದ ರಸ್ತೆ ತುಂಬಾ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಹಾಳಾಗಿರುವ ರಸ್ತೆಗಳನ್ನು ಯಾವಾಗ ಸರಿಪಡಿಸಲಾಗುವುದು;

(ಇ) ಈ ಭಾಗದ ಹೊಸ ರಸ್ತೆಗಳನ್ನು ಮಾಡಲು ವಿವಿಧ ಹೆಡ್‌ಗಳಲ್ಲಿ ತೆಗೆದುಕೊಂಡಿರುವ ರಸ್ತೆಗಳಾವುವು;

(ಈ) ಈ ವಿಭಾಗದ ಮೂಲಕ ಹಾದು ಹೋಗಿರುವ ಎನ್.ಎಚ್.ಗಳು ಹಾಗೂ ಎಸ್.ಎಚ್.ಗಳು ಯಾವುವು?

## ಉತ್ತರ ಕರ್ನಾಟಕದಲ್ಲಿ ಕೃಷಿ ವಿದ್ಯಾಲಯಗಳನ್ನು ಸ್ಥಾಪಿಸುವ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೬೮೮ (೮೯೫) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದಲ್ಲಿ ಹೊಸ ಕೃಷಿ ವಿದ್ಯಾಲಯಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಒಂದು ಕೃಷಿ ವಿದ್ಯಾಲಯ ಪ್ರಾರಂಭಿಸಬೇಕಾದರೆ ಕನಿಷ್ಠ ಎಷ್ಟು ಎಕರೆ ಜಮೀನು ಬೇಕಾಗುವುದು;

(ಇ) ಈಗಾಗಲೇ ಗುರುತಿಸಿರುವ ಜಾಗ ಯಾವ ಜಿಲ್ಲೆಗೆ ಸೇರಿದೆ; ಎಂದಿನಿಂದ ಪ್ರಾರಂಭಿಸಲಾಗುವುದು?

## ಹರಿದಾಸನಹಳ್ಳಿಯಲ್ಲಿ ಉಪಸ್ಥಾವರ ನಿರ್ಮಾಣದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೬೮೯ (೮೯೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ತಾಲ್ಲೂಕು ಕಸಬಾ ಹೋಬಳಿಯ ಹರಿದಾಸನಹಳ್ಳಿಯಲ್ಲಿ ಉಪಸ್ಥಾವರ ಮಾಡಲು ಎಷ್ಟು ವರ್ಷಗಳಿಂದ ಬೇಡಿಕೆ ಬಂದಿದೆ;

(ಆ) ಹಲವಾರು ವರ್ಷಗಳಿಂದ ಈ ಭಾಗದ ರೈತರು ಹತ್ತಾರೂ ಭಾರಿ ಬೇಡಿಕೆ ಇಟ್ಟಿದ್ದು, ತುಂಬಾ ಸಂಕಷ್ಟಕ್ಕೆ ಈಡಾಗಿ ಅನೇಕ ಪ್ರತಿಭಟನೆ ಮಾಡುತ್ತಿರುವುದು ತಿಳಿದಿದೆಯೆ;

(ಇ) ಮಂತ್ರಿಗಳು ಮಂಜೂರು ಮಾಡಲು ಆದೇಶಿಸಿದ್ದರೂ ಇದುವರೆಗೆ ಪ್ರಾರಂಭ ಮಾಡದಿರಲು ಕಾರಣವೇನು;

(ಈ) ರೈತರ ಸಂಕಷ್ಟ ಗಮನದಲ್ಲಿಟ್ಟುಕೊಂಡು ಕೂಡಲೇ ಹರಿದಾಸನಹಳ್ಳಿಯಲ್ಲಿ ಉಪಸ್ಥಾವರ ನಿರ್ಮಾಣ ಮಾಡಲಾಗುವುದೆ; ಸರ್ಕಾರ ಯಾವ ಕಾಲಮಿತಿಯೊಳಗೆ ಮಾಡಲಾಗುವುದು?

## ಬಳ್ಳಾರಿ ಜಿಲ್ಲೆಯಲ್ಲಿ ಗ್ರಾಮಪಂಚಾಯತ್‌ಗಳನ್ನು ಪಟ್ಟಣ ಪಂಚಾಯತಗಳಾಗಿ ಮೇಲ್ದರ್ಜೆಗೆರಿಸುವ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯೦ (೯೦೪) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳನ್ನು ಪಟ್ಟಣ ಪಂಚಾಯತ್‌ಗಳಾಗಿ ಮೇಲ್ದರ್ಜೆಗೆ ಏರಿಸಲು ಸರ್ಕಾರ ಕ್ರಮ ಕೈಗೊಂಡಿದೆ; ಅವು ಯಾವುವು;

(ಆ) ಜಿಲ್ಲೆಯಲ್ಲಿ ಹೊಸ ಪಟ್ಟಣ ಪಂಚಾಯತ್‌ಗಳನ್ನು ಯಾವಾಗ ರಚಿಸಿ ಆದೇಶ ಹೊರಡಿಸಲಾಗುವುದು?

## ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ನಿಗದಿಪಡಿಸಿರುವ ಅನುದಾನ ಕುರಿತು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯೧ (೯೦೫) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಸರ್ಕಾರವು ೨೦೧೪-೧೫ ರಲ್ಲಿ ನಿಗದಿಪಡಿಸಿರುವ ಅನುದಾನದ ಮೊತ್ತವೆಷ್ಟು; ಬಿಡುಗಡೆಯಾದ ಹಣವೆಷ್ಟು ಮತ್ತು ಖರ್ಚಾದ ಹಣವೆಷ್ಟು;

(ಆ) ಈ ವರ್ಗದ ವಿದ್ಯಾರ್ಥಿಗಳಿಗೆ ಪ್ರಸ್ತುತ ರಾಜ್ಯದಲ್ಲಿ ಎಷ್ಟು ವಸತಿ ನಿಲಯಗಳಿವೆ; ಜನಸಂಖ್ಯೆಗೆ ಅನುಗುಣವಾಗಿ ಈ ವಸತಿ ನಿಲಯಗಳು ಇದೆಯೇ;

(ಇ) ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ವಸತಿ ನಿಲಯಗಳನ್ನು ನಿರ್ಮಿಸಲು ಸರ್ಕಾರವು ಯೋಚಿಸಿದೆಯೇ; ಈ ಯೋಜನೆಗಾಗಿ ಸರ್ಕಾರವು ನಿಗದಿಪಡಿಸಿರುವ ಅನುದಾನವೆಷ್ಟು?

## ಸಾವಯವ ಕೃಷಿ ಮಿಷನ್ ಯೋಜನೆಯ ಕುರಿತು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯೨ (೯೦೬) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾವಯವ ಕೃಷಿ ಮಿಷನ್‌ನ ಯೋಜನೆಯಡಿಯಲ್ಲಿ ಕಳೆದ ೦೩ ವರ್ಷಗಳಿಂದ ಎಷ್ಟು ರೈತರಿಗೆ ಸಾವಯವ ಕೃಷಿ ತರಬೇತಿಗೆ ಒಳಪಡಿಸಲಾಗಿದೆ;

(ಆ) ಸಮಗ್ರ ಕೃಷಿ ಉತ್ಪಾದನೆ ಮತ್ತು ನಿರ್ವಹಣೆಯ ಪದ್ಧತಿಯನ್ನು ಸಾವಯವ ಕೃಷಿ ಉತ್ತೇಜನ ಕಾರ್ಯಕ್ರಮಗಳ ಅಡಿಯಲ್ಲಿ ಇಲಾಖೆಯು ಅನುಷ್ಠಾನಗೊಳಿಸಿದ ಕಾರ್ಯಕ್ರಮ ಮತ್ತು ಅದರ ಪ್ರಗತಿಗಳ ವಿವರವೇನು;

(ಇ) ಕಳೆದ ೦೩ ವರ್ಷಗಳಿಂದ ಈ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರವು ವ್ಯಯಿಸಿರುವ ಹಣವೆಷ್ಟು; ಹಾಗೂ ಈ ಯೋಜನೆಯನ್ನು ಇನ್ನು ಹೆಚ್ಚು ಅಭಿವೃದ್ಧಿ ಪಡಿಸಲು ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳೇನು?

## ಸುವರ್ಣ ಭೂಮಿ ಯೋಜನೆಯ ಸವಲತ್ತುಗಳನ್ನು ಪಡೆಯುತ್ತಿರುವ ರೈತರ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯೩ (೯೦೭) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಲ್ಲಿ ರಾಜ್ಯದ ಸುವರ್ಣ ಭೂಮಿ ಯೋಜನೆಯ ಸವಲತ್ತುಗಳನ್ನು ಪಡೆಯಲು ಆಯ್ಕೆ ಮಾಡಲಾದ ರೈತರ ಸಂಖ್ಯೆ ಎಷ್ಟು; (ವಿಧಾನ ಸಭಾವಾರು ವಿವರ ನೀಡುವುದು)

(ಆ) ಸುವರ್ಣ ಭೂಮಿ ಯೋಜನೆಯ ಸವಲತ್ತುಗಳನ್ನು ಪಡೆಯುವ ರೈತರನ್ನು ಆಯ್ಕೆ ಮಾಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು; (ವಿವರ ನೀಡುವುದು)

(ಇ) ಸುವರ್ಣ ಭೂಮಿ ಯೋಜನೆಯಡಿ ಒಬ್ಬ ರೈತರಿಗೆ ಎಷ್ಟು ಪ್ರೋತ್ಸಾಹ ಧನ ನೀಡಲಾಗುತ್ತಿದೆ; ಇದುವರೆವಿಗೂ ಎಷ್ಟು ರೈತರಿಗೆ ಸುವರ್ಣ ಭೂಮಿ ಯೋಜನೆಯ ಪ್ರೋತ್ಸಾಹ ಧನ ಮೊತ್ತವನ್ನು ನೀಡಲಾಗಿದೆ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು ಎಷ್ಟು ವಿದ್ಯುತ್ ವಿತರಣಾ ಕೇಂದ್ರಗಳಿವೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯೪ (೯೨೦) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು ಎಷ್ಟು ವಿದ್ಯುತ್ ವಿತರಣಾ ಕೇಂದ್ರಗಳಿವೆ; ತಾಲ್ಲೂಕುವಾರು ವಿವರಗಳನ್ನು ಅವುಗಳ ಸಾಮರ್ಥ್ಯಗಳೊಡನೆ ನೀಡುವುದು;

(ಆ) ಇವುಗಳ ಸಾಮರ್ಥ್ಯ ಎಷ್ಟು ವರ್ಷಗಳಿಂದ ಸ್ಥಿರವಾಗಿದೆ; ಸಾಮರ್ಥ್ಯ ಹೆಚ್ಚಿಸಿದ ವಿದ್ಯುತ್ ವಿತರಣಾ ಕೇಂದ್ರಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ವಿತರಣಾ ಕೇಂದ್ರಗಳ ಉನ್ನತೀಕರಣಕ್ಕೆ ಅವುಗಳ ಸಾಮರ್ಥ್ಯ ಹೆಚ್ಚಳಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಜಿಲ್ಲೆಯಲ್ಲಿ ಹೊಸದಾಗಿ ವಿದ್ಯುತ್ ವಿತರಣಾ ಕೇಂದ್ರಗಳನ್ನು ಸ್ಥಾಪಿಸುವ ಗುರಿಯನ್ನು ಸರ್ಕಾರ ಹೊಂದಿದೆಯೇ; ಇದ್ದಲ್ಲಿ ಯಾವ ಯಾವ ಭಾಗದಲ್ಲಿ ಸ್ಥಾಪಿಸಲು ಪ್ರಸ್ತಾವನೆ ಇದೆ; (ವಿವರ ನೀಡುವುದು) ಹೊಸ ವಿದ್ಯುತ್ ವಿತರಣಾ ಕೇಂದ್ರಗಳ ನಿರ್ಮಾಣದಿಂದ ಜಿಲ್ಲೆಯಲ್ಲಿ ವಿದ್ಯುತ್ ಸಮಸ್ಯೆಯನ್ನು ನೀಗಿಸಲು ಸರ್ಕಾರ ಹಾಕಿಕೊಂಡ ಕ್ರಮವೇನು?

## ಪ್ರಸಕ್ತ ಸಾಲಿನಲ್ಲಿ ಭಾರಿ ಮಳೆಯಿಂದ ಕೊಪ್ಪಳ-ರಾಯಚೂರು ಜಿಲ್ಲೆಯಲ್ಲಿ ಹಾನಿಗೀಡಾದ ಒಟ್ಟು ತೋಟಗಾರಿಕೆ ಪ್ರದೇಶ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೫೫ (೯೦೮) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸಕ್ತ ಸಾಲಿನಲ್ಲಿನ ಭಾರಿ ಮಳೆಯಿಂದಾಗಿ ಕೊಪ್ಪಳ-ರಾಯಚೂರು ಜಿಲ್ಲೆಯಲ್ಲಿ ಹಾನಿಗೀಡಾದ ಒಟ್ಟು ತೋಟಗಾರಿಕೆ ಬೆಳೆ ಕ್ಷೇತ್ರ ಎಷ್ಟು; ಮತ್ತು ತೋಟಗಾರಿಕೆ ಬೆಳೆಯ ಪ್ರಮಾಣ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಈ ಹಾನಿಯ ಅಂದಾಜು ಮೌಲ್ಯವನ್ನು ಇಲಾಖೆಯವರು ಸರ್ಕಾರಕ್ಕೆ ವರದಿ ಮಾಡಿರುವರೇ; (ಮಾಡಿದ್ದಲ್ಲಿ, ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಇ) ನಿಯಮಾವಳಿಗಳ ಪ್ರಕಾರ ರೈತರಿಗೆ ನೀಡಲಾಗುತ್ತಿರುವ ಪರಿಹಾರದ ಮೊತ್ತ ಎಷ್ಟು; ಇದಕ್ಕಿರುವ ಮಾನದಂಡಗಳೇನು;

(ಈ) ಕೊಪ್ಪಳ ಮತ್ತು ರಾಯಚೂರು ಜಿಲ್ಲೆಯ ರೈತರಿಗೆ ಪರಿಹಾರ ಮೊತ್ತವನ್ನು ನೀಡಲಾಗಿದೆಯೇ; ನೀಡದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು?

## ಕಲಬುರಗಿ ವಿಭಾಗದ ಜಿಲ್ಲೆಯಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿ ಎಷ್ಟು ತರಕಾರಿ ಮಾರುಕಟ್ಟೆ ನಿರ್ಮಾಣ ಮಾಡಲಾಗಿದೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯೬ (೯೦೯) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ ಅಡಿಯಲ್ಲಿ ಎಷ್ಟು ತರಕಾರಿ ಮಾರ್ಕೆಟ್ ನಿರ್ಮಾಣ ಮಾಡಲಾಗಿದೆ; (ವಿವರ ನೀಡುವುದು)

(ಆ) ಸದರಿ ತರಕಾರಿ ಮಾರ್ಕೆಟ್‌ಗಳು ಉದ್ಘಾಟನೆಗೊಂಡಿವೆಯೇ; ಇಲ್ಲವಾದಲ್ಲಿ ವಿಳಂಬಕ್ಕೆ ಕಾರಣಗಳೇನು;

(ಇ) ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಲ್ಲಿ ಸಬ್ಸಿಡಿ ಹಣವನ್ನು ಸರ್ಕಾರ ವಿತರಿಸಿದೆಯೇ; ಇಲ್ಲವಾದಲ್ಲಿ ವಿಳಂಬಕ್ಕೆ ಕಾರಣಗಳೇನು;

(ಈ) ರಾಯಚೂರು ಜಿಲ್ಲೆಯ ಸಿಂಧನೂರು ಮತ್ತು ಕೊಪ್ಪಳ ಜಿಲ್ಲೆಯ ಕೊಪ್ಪಳ ಪಟ್ಟಣದ ತರಕಾರಿ ಮಾರ್ಕೆಟ್ ಸ್ಥಿತಿ ಸದ್ಯ ಯಾವ ಹಂತದಲ್ಲಿದೆ;

(ಉ) ಮಾರ್ಕೆಟ್ ಮಳಿಗೆಗಳನ್ನು ವರ್ತಕರಿಗೆ ಯಾವ ಮಾನದಂಡಗಳ ಮೇಲೆ ನೀಡಲಾಗಿದೆ? (ವಿವರ ನೀಡುವುದು)

**ತೋಟಗಾರಿಕಾ ಇಲಾಖೆಯ ಸಸ್ಯ ಕ್ಷೇತ್ರಗಳ ಅಭಿವೃದ್ಧಿ ಬಗ್ಗೆ**

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೬೯೭ (೯೧೦) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕಾ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಸ್ಯ ಕ್ಷೇತ್ರಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಸ್ಯ ಕ್ಷೇತ್ರಗಳಲ್ಲಿ ಯಾವ ಪ್ರಭೇಧದ ಸಸ್ಯಗಳನ್ನು ಬೆಳೆಸಿ ಪೋಷಿಸಿಕೊಂಡು ಬರಲಾಗುತ್ತಿದೆ;

(ಇ) ಈ ಸಸ್ಯ ಕ್ಷೇತ್ರಗಳ ನಿರ್ವಹಣೆಗೆ ಸರ್ಕಾರ ಎಷ್ಟು ಹಣ ಖರ್ಚು ಮಾಡುತ್ತಲಿವೆ;

(ಈ) ಈ ಸಸ್ಯ ಕ್ಷೇತ್ರಗಳಿಂದ ಸರ್ಕಾರಕ್ಕೆ ಬರುವ ಆದಾಯ ವೆಷ್ಟು?

**ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ರೈತರಿಗೆ ಕೃಷಿ ಉಪಕರಣ ಪೂರೈಸುವ ಬಗ್ಗೆ**

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೬೯೮ (೯೧೧) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರಿಗೆ ಕೃಷಿ ಉಪಕರಣಗಳ ವಿತರಣೆ ಯೋಜನೆ ರಾಜ್ಯದಲ್ಲಿ ಯಾವಾಗಿನಿಂದ ಜಾರಿಗೆ ಬಂದಿದೆ;

(ಆ) ಈ ಯೋಜನೆಯಡಿ ರೈತರಿಗೆ ಯಾವ ಯಾವ ಕೃಷಿ ಉಪಕರಣಗಳನ್ನು ಸಹಾಯಧನದಡಿ ಪೂರೈಸಲಾಗುತ್ತಿದೆ;

(ಇ) ಈ ಯೋಜನೆಯಡಿ ೨೦೧೪-೧೫ ಹಾಗೂ ೨೦೧೫-೧೬ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕೃಷಿ ಉಪಕರಣಗಳನ್ನು ರೈತರಿಗೆ ಪೂರೈಸಲಾಗಿದೆಯೇ;

(ಈ) ಹಾಗಿದ್ದಲ್ಲಿ, ಎಷ್ಟು ರೈತರಿಗೆ ಯಾವ ಯಾವ ಕೃಷಿ ಉಪಕರಣಗಳನ್ನು ಪೂರೈಸಲಾಗಿದೆ? (ವಿವರವಾದ ಮಾಹಿತಿ ನೀಡುವುದು)

## ಕೃಷಿ ಮಾರಾಟ ಇಲಾಖೆಯ ಸಿಬ್ಬಂದಿಗೆ ಬಡ್ತಿ ನೀಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೬೯ (೯೧೨) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಮಾರುಕಟ್ಟೆ ಇಲಾಖೆಯಲ್ಲಿ ಬಡ್ತಿ ಮೂಲಕ ತುಂಬಬೇಕಾದ ಎಷ್ಟು ಹುದ್ದೆಗಳು ಖಾಲಿ ಇವೆ;

(ಆ) ಈ ಹುದ್ದೆಗಳಿಗೆ ಬಡ್ತಿ ನೀಡುವುದನ್ನು ಯಾವಾಗಿನಿಂದ ಸ್ಥಗಿತಗೊಳಿಸಲಾಗಿದೆ;

(ಇ) ಬಡ್ತಿ ಸ್ಥಗಿತ ಗೊಳಿಸಲು ಕಾರಣಗಳೇನು;

ಈ) ಕಾಲ ಕಾಲಕ್ಕೆ ಬಡ್ತಿ ನೀಡದಿರುವುದರಿಂದ ಹಲವಾರು ನೌಕರರು ಬಡ್ತಿ ಸೌಲಭ್ಯ ಪಡೆಯದೇ ನಿವೃತ್ತರಾಗುತ್ತಿರುವುದು ನಿಜವೆ;

ಉ) ಎಲ್ಲಾ ಖಾಲಿ ಹುದ್ದೆಗಳಿಗೆ ಬಡ್ತಿ ನೀಡಲು ಸರ್ಕಾರ ಹಾಕಿಕೊಂಡ ಕಾಲಮಿತಿ ಯಾವುದು?

## ಸಾರ್ವಜನಿಕ ಉದ್ದಿಮೆಗಳ ನಷ್ಟ ತಪ್ಪಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೭೦೦ (೯೧೩) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ಯಮಗಳು ಯಾವುವು;

(ಆ) ಈ ಉದ್ಯಮಗಳಲ್ಲಿ ೨೦೦೦ನೇ ಸಾಲಿನಿಂದ ಇಲ್ಲಿಯವರೆಗೆ ಗಳಿಸಿರುವ ಲಾಭ-ನಷ್ಟ ಹಾಗೂ ಸಂಚಯಿತ ನಷ್ಟ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಎಷ್ಟು ಸಾರ್ವಜನಿಕ ಉದ್ಯಮಗಳು ೩ ವರ್ಷಗಳ ಲಾಭವು ಸಂಚಯಿತ ನಷ್ಟದ ಶೇಕಡಾ ೩೦ಕ್ಕಿಂತ ಹೆಚ್ಚಿಗೆ ಲಾಭವನ್ನು ಗಳಿಸಿವೆ;

(ಈ) ೧೫ ವರ್ಷಗಳಿಂದ ನಷ್ಟದಲ್ಲಿರುವ ಸಾರ್ವಜನಿಕ ಉದ್ಯಮಗಳು ಈ ಸಂಚಯಿತ ನಷ್ಟ ಪ್ರತಿ ಶತ ೩೦ಕ್ಕಿಂತ ಹೆಚ್ಚಿನ ಲಾಭಗಳಿಸುವಂತಾಗಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು;

(ಉ) ನಷ್ಟದಲ್ಲಿ ಉದ್ದಿಮೆಗಳನ್ನು ಪುನಶ್ಚೇತನಗೊಳಿಸಲು ಅಥವಾ ಖಾಯಂ ಆಗಿ ಮುಚ್ಚಲು ಸರ್ಕಾರ ಚಿಂತನೆ ನಡೆಸಿದೆಯೇ?

## ಕೈತೋಟದಲ್ಲಿ ಸಾವಯವ ಪದ್ಧತಿಯಲ್ಲಿ ತರಕಾರಿಗಳನ್ನು ಬೆಳೆಯುವ ಬಗ್ಗೆ

**ಡಾ: ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೭೦೧ (೯೧೪) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮನೆಯ ತಾರಸಿ ಅಥವಾ ಕೈತೋಟದಲ್ಲಿ ತರಕಾರಿಗಳನ್ನು ಬೆಳೆಸುವವರಿಗೆ ಉತ್ತೇಜನ ನೀಡುವ ಯೋಜನೆಯನ್ನು ಸರ್ಕಾರವು ಹಮ್ಮಿಕೊಂಡಿದೆಯೇ;

(ಆ) ಹಾಗಿದ್ದಲ್ಲಿ, ಯಾವ ಯಾವ ರೀತಿಯಲ್ಲಿ ಪ್ರೋತ್ಸಾಹಿಸಲಾಗುವುದು;

(ಇ) ಸಾವಯವ ಪದ್ಧತಿಯಲ್ಲಿ ತರಕಾರಿಗಳನ್ನು ಬೆಳೆಯುವ ಬಗ್ಗೆ ಗೃಹಿಣಿಯರಿಗೆ ತರಬೇತಿ ನೀಡಲಾಗುವುದೇ?

## ಬೆಳಗಾವಿ ನಗರದ ರಸ್ತೆಗಳು

**ಡಾ: ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೭೦೨ (೯೧೫) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರದಲ್ಲಿನ ರಸ್ತೆಗಳು ದುಸ್ಥಿಯಲ್ಲಿದ್ದು ನಾಗರಿಕರು ಸಂಕಷ್ಟಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಸ್ತೆಗಳ ಅಗಲೀಕರಣ ಮತ್ತು ದುರಸ್ಥಿ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೊಳ್ಳಲಾಗುವುದೆ;

(ಇ) ರಿಂಗ್ ರೋಡ್ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು?

## ಕುಗ್ರಾಮಗಳಿಗೆ ವಿದ್ಯುತ್ ಸರಬರಾಜು ಮಾಡುವ ಬಗ್ಗೆ

**ಡಾ: ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೭೦೩ (೯೧೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ವಿಕೇಂದ್ರಿತ ವಿದ್ಯುತ್ ಸರಬರಾಜು ಯೋಜನೆಗಳು ಯಶಸ್ವಿಯಾಗದೇ ರಾಜ್ಯದ ಹಲವಾರು ಗ್ರಾಮಗಳು ಬೆಳಕಿನ ಭಾಗ್ಯ ಕಾಣದೇ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಕುಗ್ರಾಮಗಳಿಗೆ ವಿದ್ಯುತ್ ಸರಬರಾಜು ಮಾಡಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ;

(ಇ) ಈ ಕುಗ್ರಾಮಗಳಿಗೆ ಆದ್ಯತೆ ಮೇಲೆ ಹೆಚ್ಚಿನ ಸೋಲಾರ್ ವಿದ್ಯುತ್ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ?

## ಸಮರ್ಪಕ ಬೀಜ ಮತ್ತು ಗೊಬ್ಬರಗಳ ವಿತರಣೆ ಕುರಿತು

**ಡಾ: ಮತ್ತಿಕಟ್ಟೆ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೭೦೪ (೯೧೭) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಂಗಾರು ಮಳೆ ಪ್ರಾರಂಭವಾಗಿದ್ದು, ರೈತರು ಬಿತ್ತನೆಗೆ ತಯಾರಾಗುತ್ತಿರುವ ಸಂದರ್ಭದಲ್ಲಿ ಅಸಮರ್ಪಕ ಬೀಜ ಮತ್ತು ಗೊಬ್ಬರಗಳ ವಿತರಣೆಯಿಂದಾಗಿ ರೈತರುಗಳು ಸಂಕಷ್ಟಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯ ಸರ್ಕಾರ ಮಾರಾಟ ಮಹಾಮಂಡಳಕ್ಕೆ ಹಣ ಕೊಟ್ಟರೂ ಅದರ ಸದ್ಬಳಕೆಯಾಗುತ್ತಿಲ್ಲ ಎಂಬುದನ್ನು ಸರ್ಕಾರವು ಗಮನಿಸಿದೆಯೇ;

(ಇ) ಹಾಗಿದ್ದಲ್ಲಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳ ಮೂಲಕ ಉತ್ತಮ ಗುಣಮಟ್ಟದ ಬೀಜ ಮತ್ತು ಗೊಬ್ಬರಗಳನ್ನು ಸಮರ್ಪಕ ರೀತಿಯಲ್ಲಿ ವಿತರಣೆ ಮಾಡುವ ಬಗ್ಗೆ ಸರ್ಕಾರವು ತುರ್ತು ಕ್ರಮಗಳನ್ನು ಕೈಗೊಳ್ಳುವುದೆ;

(ಈ) ರೈತರು ಬೀಜ ಮತ್ತು ಗೊಬ್ಬರಕ್ಕಾಗಿ ಯಾವತ್ತೂ ಎದುರಿಸುತ್ತಿರುವ ಸಮಸ್ಯೆಗಳ ನಿವಾರಣೆಗಾಗಿ ಸೂಕ್ತ ಕಾರ್ಯನೀತಿ ರೂಪಿಸಲಾಗುವುದೆ?

## ಕಬ್ಬು ಬೆಳೆಗಾರರನ್ನು ಸಂಕಷ್ಟಗಳಿಂದ ಪಾರು ಮಾಡುವ ಬಗ್ಗೆ

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೭೦೫ (೯೧೮) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಕಬ್ಬು ಬೆಳಗಾರರು ಸಕ್ಕರೆ ಕಾರ್ಖಾನೆಗಳಿಂದ ಬಾಕಿ ಹಣ ಪಡೆಯುವಲ್ಲಿ ನಿರಂತರವಾಗಿ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರೈತರನ್ನು ಈ ರೀತಿಯ ಸಂಕಷ್ಟಗಳಿಂದ ಪಾರು ಮಾಡಲು ಸರ್ಕಾರವು ಸೂಕ್ತ ಕಾರ್ಯಯೋಜನೆಯನ್ನು ರೂಪಿಸುವುದೆ;

(ಇ) ಸಕ್ಕರೆ ಕಾರ್ಖಾನೆಗಳೆಲ್ಲವೂ ಕೋ–ಜನರೇಷನ್ ವಿಧಾನದ ಜೊತೆಗೆ ಸೋಲಾರ ವಿದ್ಯುತ್ ಉತ್ಪಾದಿಸಲು ಉತ್ತೇಜಿಸಲಾಗುವುದೇ?

## ರಾಜ್ಯದ ಅಲ್ಪಸಂಖ್ಯಾತರ ಹಾಸ್ಟಲ್‌ಗಳ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೭೦೬ (೭೮೦) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೪ ವರ್ಷಗಳಿಂದ ಈ ಹಾಸ್ಟೆಲ್‌ಗಳ ಮಕ್ಕಳ ಊಟದ ವ್ಯವಸ್ಥೆಗೆ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಕಳಪೆ ಗುಣಮಟ್ಟದ ಆಹಾರ ಸೇವಿಸಿ, ಅಸ್ವಸ್ಥಗೊಂಡ ಘಟನೆಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹಾಗಿದ್ದಲ್ಲಿ, ಇಂತಹ ಘಟನೆಗಳಿಗೆ ಕಾರಣರಾದ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಹಾಸ್ಟೆಲ್‌ವಾರು ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರಿಗೆ ಮನೆಗಳನ್ನು ಕಟ್ಟಿಕೊಡುವುದು

**ಶ್ರೀ ಕೆ. ಅಬ್ದುಲ್ ಜಬ್ಬಾರ್** (ನಾಮನಿರ್ದೇಶನ) –

೨೦೭ (೮೩೧) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅಲ್ಪಸಂಖ್ಯಾತರಿಗೆ ಮನೆಗಳನ್ನು ನಿರ್ಮಾಣ ಮಾಡಿಕೊಡುವ ವ್ಯವಸ್ಥೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಒಂದು ಮನೆಗೆ ಎಷ್ಟು ಸಹಾಯ ಧನ ನೀಡಲಾಗಿದೆ; ಎಷ್ಟು ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ; ಎಷ್ಟು ಮನೆಗಳಿಗೆ ನೀಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ಮುಸ್ಲಿಂ ಸ್ಮಶಾನಗಳ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ) –**

೭೦೮ (೮೩೨) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೦೯–೧೦ ರಿಂದ ಜಿಲ್ಲಾ ಹಾಗೂ ತಾಲ್ಲೂಕುವಾರು ಮುಸ್ಲಿಂ ಸ್ಮಶಾನಗಳಿಗೆ ವಕ್ಫ್ ಮಂಡಳಿಯಿಂದ ಕಾಂಪೌಂಡ್‌ಗಳನ್ನು ನಿರ್ಮಾಣ ಮಾಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ೨೦೦೯–೧೦ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಮುಸ್ಲಿಂ ಸಂಘಗಳಿಂದ ಸ್ಮಶಾನಗಳಿಗೆ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆಗಳೆಷ್ಟು; (ಜಿಲ್ಲಾ ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬಾಕಿ ಉಳಿದಿರುವ ಮುಸ್ಲಿಂ ಸ್ಮಶಾನಗಳಿಗೆ ಕಾಂಪೌಂಡ್‌ಗಳನ್ನು ಸರ್ಕಾರವು ವಿಶೇಷ ಅನುದಾನದ ಅಡಿಯಲ್ಲಿ ನಿರ್ಮಾಣ ಮಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಮಾಹಿತಿ ನೀಡುವುದು?

## ಅಲ್ಪಸಂಖ್ಯಾತರ ಇಲಾಖೆಯ ಶಾದಿ ಮಹಲ್ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ) –**

೭೦೯ (೮೩೩) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅಲ್ಪಸಂಖ್ಯಾತರ ಇಲಾಖೆಯಿಂದ ಶಾದಿ ಮಹಲ್ ನಿರ್ಮಾಣಕ್ಕೆ ೨೦೧೪–೧೫ನೇ ಸಾಲಿಗೆ ಬಂದಿರುವ ಅರ್ಜಿಗಳ ಸಂಖ್ಯೆಗಳೆಷ್ಟು;

(ಆ) ಅಲ್ಪಸಂಖ್ಯಾತರ ಇಲಾಖೆಯಿಂದ ಅನುಮೋದನೆ ಹಾಗೂ ಹಣ ಬಿಡುಗಡೆ ಮಾಡಿರುವ ಶಾದಿ ಮಹಲ್‌ಗಳ ಸಂಖ್ಯೆಗಳೆಷ್ಟು;

(ಇ) ಈಗಾಗಲೇ ಸರ್ಕಾರದಿಂದ ಶಾದಿ ಮಹಲ್ ನಿರ್ಮಾಣಕ್ಕೆ ಅನುಮೋದನೆ ಹಾಗೂ ಹಣ ಬಿಡುಗಡೆ ಮಾಡಿ ಕಾಮಗಾರಿಗಳು ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ; ಹಣ ಬಿಡುಗಡೆ ಮಾಡದೆ ಬಾಕಿ ಉಳಿದಿರುವ ಶಾದಿ ಮಹಲ್‌ಗಳನ್ನು ಪೂರ್ಣಗೊಳಿಸುವುದು ಯಾವಾಗ?

## ಗ್ರಾಹಕರ ದೂರು ದಾಖಲಿಸಲು ಬೆಸ್ಕಾಂನಲ್ಲಿ "ಸಹಾಯವಾಣಿ" ಸ್ಥಾಪಿಸುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ** (ನಾಮನಿರ್ದೇಶನ) –

೭೧೦ (೮೪೫) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಹಕರ ದೂರು ದಾಖಲಿಸಲು ಬೆಸ್ಕಾಂನಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆಯೇ; ಸಹಾಯವಾಣಿಯ ಕಾರ್ಯಸ್ವರೂಪವೇನು; (ವಿವರ ನೀಡುವುದು)

(ಆ) ಈ ಸಹಾಯವಾಣಿ ಆರಂಭವಾದಾಗಿನಿಂದ ಎಷ್ಟು ಜನ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ; ಸಿಬ್ಬಂದಿಗಳನ್ನು ಖಾಯಂ ಆಗಿ ನೇಮಕ ಮಾಡಲಾಗಿದೆಯೇ ಅಥವಾ ಹೊರ ಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಇ) ಪ್ರತಿ ದಿನ ಸಹಾಯವಾಣಿಗೆ ಬರುವ ದೂರುಗಳ ಸಂಖ್ಯೆ ಎಷ್ಟು; ಸಹಾಯವಾಣಿ ನಿರ್ವಹಣೆಗೆ ಪ್ರತಿ ತಿಂಗಳು ವೆಚ್ಚವಾಗುವ ಹಣವೆಷ್ಟು; (ವರ್ಷಾವಾರು ವಿವರ ನೀಡುವುದು)

(ಈ) ಸಹಾಯವಾಣಿಯ ಖರ್ಚು-ವೆಚ್ಚ ಕಡಿಮೆಗೊಳಿಸಲು ನಿರ್ದೇಶನ ನೀಡಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಬೆಸ್ಕಾಂಗೆ ಪತ್ರ ಬರೆದಿದೆಯೇ; (ವಿವರ ನೀಡುವುದು)

(ಉ) ಬೇರೆ ರಾಜ್ಯಗಳಲ್ಲಿ ವಿದ್ಯುತ್ ಸಹಾಯವಾಣಿಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂದು ಅಧ್ಯಯನ ನಡೆಸಲು ಬೆಸ್ಕಾಂ ಅಧಿಕಾರಿಗಳ ತಂಡವನ್ನು ಹೊರ ರಾಜ್ಯಗಳಿಗೆ ಕಳುಹಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಊ) ಮುಂಗಾರು ಮಳೆ ಬರುವ ಸಮಯದಲ್ಲಿ ಸಹಾಯವಾಣಿ ಲೈನ್‌ಗಳು ಸ್ಥಗಿತಗೊಂಡು, ವಿದ್ಯುತ್ ಸರಬರಾಜು ಆಗದೇ ಗ್ರಾಹಕರಿಗೆ ತೊಂದರೆಯಾಗಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ;

(ಋ) ಇಂತಹ ತುರ್ತು ಸಂದರ್ಭಗಳಲ್ಲಿ ಸಹಾಯವಾಣಿ ಲೈನ್‌ಗಳು ಸ್ಥಗಿತಗೊಳ್ಳುವುದನ್ನು ತಡೆಯಲು ಹಾಗೂ ತ್ವರಿತವಾಗಿ ವಿದ್ಯುತ್ ಸಂಪರ್ಕ ನೀಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಪೂರ್ಣ ವಿವರ ನೀಡುವುದು)

## ಚಿತ್ರದುರ್ಗ ಜಿಲ್ಲೆಯಲ್ಲಿ ಶೇಂಗಾ ಬೀಜದ ಕೊರತೆ ಬಗ್ಗೆ

**ಶ್ರೀ ಜೆ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೭೧೧ (೮೪೧) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಜಿಲ್ಲೆಯ ಪ್ರಮುಖ ಬೆಳೆ ಶೇಂಗಾ ಬಿತ್ತನೆ ಬೀಜಕ್ಕೆ ರೈತರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಚಿತ್ರದುರ್ಗ ಜಿಲ್ಲೆಯ ಶೇಂಗಾ ಬಿತ್ತನೆ ಬೀಜಕ್ಕೆ ಇದುವರೆಗೆ ಪೂರೈಸಲಾಗಿರುವ ಶೇಂಗಾ ಬಿತ್ತನೆ ಬೀಜದ ಪ್ರಮಾಣ ಎಷ್ಟು; ಇನ್ನೂ ಬೇಡಿಕೆ ಇರುವ ಪ್ರಮಾಣ ಎಷ್ಟು; ತಾಲ್ಲೂಕುವಾರು ಮಾಹಿತಿ ಒದಗಿಸುವುದು:

(ಇ) ರೈತರಿಗೆ ಅಗತ್ಯವಿರುವಷ್ಟು ಶೇಂಗಾ ಬೀಜ ಪೂರೈಸಲು ಕೃಷಿ ಇಲಾಖೆ ಕೈಗೊಂಡಿರುವ ಕ್ರಮವೇನು; ಮಾಹಿತಿ ಒದಗಿಸುವುದು?

## ಚಿತ್ರದುರ್ಗ ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದಾಗಿ ತೋಟಗಾರಿಕೆ ಬೆಳೆ ನಷ್ಟದ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧೨ (೮೪೦) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದಾಗಿ ದಾಳಿಂಬೆ ಸೇರಿದಂತೆ ವಿವಿಧ ತೋಟಗಾರಿಕೆ ಬೆಳೆಗಳು ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಬೆಳೆ ನಷ್ಟದಿಂದಾಗಿ ಕಂಗಾಲಾದ ರೈತರಿಗೆ ಪರಿಹಾರ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಮಾವಿನ ಬೆಳೆಯನ್ನು ಉತ್ತೇಜಿಸುವ ಬಗ್ಗೆ

**ಶ್ರೀ ಕೆ. ಗೋವಿಂದರಾಜ್( ವಿಧಾನಸಭೆಯಿಂದ ಚುನಾಯಿತರಾದವರು) –**

೭೧೩ (೮೨೬) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾವಿನ ಬೆಳೆಯನ್ನು ಹೊಂದಿರುವ ತೋಟಗಾರಿಕೆ ಭೂಮಿಯ ಒಟ್ಟು ವಿಸ್ತೀರ್ಣ ಎಷ್ಟು; ಬೆಳೆಯಲಾಗುವ ಮಾವಿನ ತಳಿಗಳ ಹೆಸರುಗಳೊಂದಿಗೆ ಜಿಲ್ಲಾವಾರು ವಿವರ ನೀಡುವುದು;

(ಆ) ಇತ್ತೀಚಿನ ವರ್ಷಗಳಲ್ಲಿ ಮಾವಿನ ಬೆಳೆಯು ಕಡಿಮೆಯಾಗುತ್ತಿರಲು ಕಾರಣವೇನು; ಮಾವು ಬೆಳೆಯನ್ನು ಉತ್ತೇಜಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಮೈಸೂರು, ಚಾಮರಾಜನಗರ ಜಿಲ್ಲೆಗಳಲ್ಲಿ ತೆಂಗಿನ ಬೆಳೆ ಹಾನಿಗೆ ಪರಿಹಾರ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧೪ (೮೦೫) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಬರಗಾಲ ಹಾಗೂ ರೋಗಕ್ಕೆ ತುತಾಗಿದ್ದ ತೆಂಗಿನ ಮರಗಳ ಸಂಖ್ಯೆ ಎಷ್ಟು; ಇದುವರೆಗೆ ಎಷ್ಟು ರೈತರಿಗೆ ಎಷ್ಟು ಪರಿಹಾರ ಧನವನ್ನು ನೀಡಲಾಗಿದೆ; ಹಾನಿಗೊಳಗಾದ ತೆಂಗು ಬೆಳೆಗಾರರಿಗೆ ರಾಜ್ಯ ಸರ್ಕಾರದಿಂದ ಮತ್ತು ಕೇಂದ್ರ ಸರ್ಕಾರದ ವತಿಯಿಂದ ನೀಡಿರುವ ಪರಿಹಾರ ಧನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ತೆಂಗಿನ ಬೆಳೆ ಹಾನಿಯ ಪರಿಹಾರ ಮತ್ತು ಹಾನಿಗೊಳಗಾದ ತೆಂಗಿನ ತೋಟಗಳ ಪುನರುಜ್ಜೀವನಕ್ಕೆ ಕೇಂದ್ರ ಸರ್ಕಾರಕ್ಕೆ ಕಳುಹಿಸಿದ ಪ್ಯಾಕೇಜ್ ವಿವರಗಳೇನು; ಈ ಪ್ಯಾಕೇಜ್‌ನ ರೀತ್ಯಾ ಕೇಂದ್ರದಿಂದ ಪರಿಹಾರ ಧನ ಮಂಜೂರಾಗಿ ಬಿಡುಗಡೆ ಆಗಿದೆಯೇ; (ವಿವರ ನೀಡುವುದು)

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಹೆಕ್ಟೇರ್ ವಿಸ್ತೀರ್ಣದ ತೆಂಗಿನ ತೋಟಗಳ ಪುನರುಜ್ಜೀವನ ಕಾರ್ಯ ನಡೆದಿದೆ; ಹೊಸದಾಗಿ ನೆಟ್ಟಿರುವ ತೆಂಗಿನ ಮರಗಳ ಸಂಖ್ಯೆ ಎಷ್ಟು?

**ಕಲಬುರಗಿ ಜಿಲ್ಲೆಯ ಎ.ಪಿ.ಎಂ.ಸಿ ಗೆ ಸಂಬಂಧಿಸಿದಂತೆ**

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) –**

೭೧೫ (೮೬೧) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಕಲಬುರಗಿ ಎ.ಪಿ.ಎಂ.ಸಿ.ಗೆ ಸರ್ಕಾರದಿಂದ ಬಂದ ಅನುದಾನವೆಷ್ಟು;

(ಆ) ಈ ಅನುದಾನವನ್ನು ಯಾವ ಯಾವ ಅಭಿವೃದ್ಧಿ ಕಾರ್ಯಗಳಿಗೆ ಖರ್ಚು ಮಾಡಲಾಗಿದೆ;

(ಇ) ಇದರಲ್ಲಿ ಎಷ್ಟು ಅಭಿವೃದ್ಧಿ ಕಾರ್ಯಗಳು ಪೂರ್ಣಗೊಂಡಿವೆ; ಹಾಗೂ ಪೂರ್ಣಗೊಳ್ಳದೆ ಉಳಿದುಕೊಂಡಿರುವ ಅಭಿವೃದ್ಧಿ ಕಾರ್ಯಗಳು ಪೂರ್ಣಗೊಳ್ಳಲು ಎಷ್ಟು ಸಮಯ ಬೇಕಾಗುತ್ತದೆ?

**ಕಳೆದ ೫ ವರ್ಷಗಳಿಂದ ರೈತ ಸಂಜೀವಿನಿ ಯೋಜನೆಯ ವಿವರ ನೀಡುವುದು**

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೭೧೬ (೮೬೬) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಿಂದ ಬಾಗಲಕೋಟೆ, ವಿಜಯಪುರ, ಗದಗ ಜಿಲ್ಲೆಯಲ್ಲಿ ರೈತ ಸಂಜೀವಿನಿ ವಿಮಾ ಅಪಘಾತ ಯೋಜನೆಯ ಅಡಿಯಲ್ಲಿ ವಿತರಿಸಿರುವ ಹಣ ಎಷ್ಟು ಹಾಗೂ ಒಟ್ಟು ಸಂಖ್ಯೆಗಳು ಎಷ್ಟು; (ಪುರುಷ ಮತ್ತು ಮಹಿಳೆಯರ ಪೂರ್ಣ ಮಾಹಿತಿ ಹಾಗೂ ಎಷ್ಟು ಹಣ ನೀಡಿರುವ ಬಗ್ಗೆ ಮಾಹಿತಿ ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಬಾಗಲಕೋಟೆ, ವಿಜಯಪುರ ಗದಗ ಜಿಲ್ಲೆಯಲ್ಲಿ ರೈತರಿಗೆ ನೀಡಿರುವ ತರಬೇತಿ ಯಾವುವು? (ತಾಲ್ಲೂಕುವಾರು ವಿವರ ನೀಡುವುದು)

## ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ಬೋಧಕರ ಕೊರತೆಯ ಬಗ್ಗೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು)–**

೭೧೭ (೮೬೭) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆಯ ತೋಟಗಾರಿಕಾ ವಿಶ್ವವಿದ್ಯಾಲಯದಲ್ಲಿ ಬೋಧಕರ/ ಬೋಧಕೇತರರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಭರ್ತಿ ಮಾಡಿದ್ದರೆ ವಿವರ ನೀಡುವುದು)

(ಇ) ವಿಶ್ವವಿದ್ಯಾಲಯಕ್ಕೆ ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಂದಿರುವ ಹಣ ಎಷ್ಟು? (ಯಾವ ಯಾವ ಉದ್ದೇಶಕ್ಕಾಗಿ ಹಣವನ್ನು ಖರ್ಚು ಮಾಡಲಾಗಿದೆ; ಪೂರ್ಣ ಮಾಹಿತಿ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು